# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 162 ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 ಚಿತ್ರದುರ್ಗ ದಿನಾಂಕ: 10–01–2024 ಬುಧವಾರ ಪುಟ: 4 ಬೆಲೆ : ರೂ.2–00

Volume - 01 Issue - 162 Title- Code: KARKAN 28269 Chitradurga Date: 10-01-2024 Wednesday Page: 4 Price: Rs. 2-00



ಒಳಪುಟದ ಸುದ್ದಿಗಳು

ನಕಲಿಜಾತಿ ಪ್ರಮಾಣಪತ್ರಕ್ಕೆ ಕಡಿವಾಣ ಹಾಕದಿದ್ದರೆ, ಹೋರಾಟ: ಪ್ರಸನ್ನಾನಂದ ಶ್ರೀ 2

ವಲಸೆ ಕಾರ್ಮಿಕರ ಮಕ್ಕಳಿಗೆ ಲಸಿಕೆ, ಗರ್ಭಿಣಿ ಆರೈಕೆ ಪಡೆಯಲು ಮನವೊಲಿಕೆ 3

ಗ್ರಾಮ ದೇವತೆ ಶ್ರೀಚಳ್ಳಕೆರೆಯಮ್ಮನ ಜಾತ್ರೋತ್ಸವಕ್ಕೆ ಭರದ ಸಿದ್ಧತೆ 4



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

ಸಂತೋಷದ ಜೀವನಕ್ಕಾಗಿ ಸರಳ ಸೂತ್ರಗಳು...
ಯಾರನ್ನೂ ಸೋಲಿಸಲು ಎಂದಿಗೂ ಪ್ರಯತ್ನಿಸಬೇಡಿ; ಎಲ್ಲರನ್ನು ಗೆಲ್ಲಲು ಪ್ರಯತ್ನಿಸಿ; ಯಾರನ್ನೂ ನೋಡಿ ನಗಬೇಡಿ ಆದರೆ ಎಲ್ಲರೊಂದಿಗೆ ನಗಲು ಪ್ರಯತ್ನಿಸಿ

» ಶುಭೋದಯ

## ಫಾಸ್ಟ್ ನ್ಯೂಸ್

### ವಾಲ್ಮೀಕಿ ಜಾತ್ರೆ ತಾಲೂಕು ಅಧ್ಯಕ್ಷರ ಆಯ್ಕೆ

» ಚಿತ್ರದುರ್ಗ



ರಾಜನಹಳ್ಳಿಯ ಮಹರ್ಷಿ ವಾಲ್ಮೀಕಿ ಗುರುಪೀಠದಲ್ಲಿ 2024ರ ಫೆ.8 ಮತ್ತು 9ರಂದು ಮಹರ್ಷಿ ವಾಲ್ಮೀಕಿ ಜಾಗೃತಿ ಜಾತ್ರೆ ನಡೆಯಲಿದ್ದು ಈ ಜಾತ್ರೆಗೆ ಈ ಬಾರಿಯ ಜಾತ್ರೆಗೆ ಚಿತ್ರದುರ್ಗ ತಾಲೂಕು ಜಾತ್ರಾ ಸಮಿತಿ ಅಧ್ಯಕ್ಷರನ್ನಾಗಿ ಬಾಲೇನಹಳ್ಳಿ ತಿಪ್ಪೇಸ್ವಾಮಿ(ಎಟಿಎಸ್) ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.

### ನಾಮಫಲಕಗಳಲ್ಲಿ ಕನ್ನಡ ಕಡ್ಡಾಯ: ನಿಯಮ ಮೀರಿದರೆ ಪರವಾನಿಗೆ ರದ್ದು

» ಚಿತ್ರದುರ್ಗ



ಚಿತ್ರದುರ್ಗ ನಗರಸಭೆ ವ್ಯಾಪ್ತಿಯಲ್ಲಿನ ಎಲ್ಲಾ ಉದ್ದಿಮೆಗಳ ನಾಮಫಲಕಗಳಲ್ಲಿ ಕನ್ನಡ ಭಾಷೆ ಬಳಸುವುದು ಕಡ್ಡಾಯವಾಗಿದೆ. ನಿಯಮ ಮೀರಿದವರ ಉದ್ದಿಮೆ ಪರವಾನಿಗೆಂಯುನ್ನು ರದ್ದುಗೊಳಿಸಿ, ನಿರ್ಧಾಕ್ಷಿಣ್ಯವಾಗಿ ಉದ್ದಿಮೆಗಳನ್ನು ಮುಚ್ಚಿಸಲಾಗುವುದು ಎಂದು ನಗರಸಭೆ ಪೌರಾಯುಕ್ತೆ ಎಂ.ರೇಣುಕಾ ಸೂಚನೆ ನೀಡಿದ್ದಾರೆ. ನಗರಸಭೆಯಿಂದ 3000ಕ್ಕೂ ಅಧಿಕ ವಿವಿಧ ಬಗೆಯ ಉದ್ದಿಮೆಗಳಿಗೆ ಪರವಾನಿಗೆ ನೀಡಲಾಗಿದೆ. ಈ ಉದ್ದಿಮೆಗಳು, ಅಂಗಡಿ ಹಾಗೂ ವಾಣಿಜ್ಯವ್ಯಾಪಾರಸಂಸ್ಥೆಗಳುತಮ್ಮನಾಮಫಲಕದಲ್ಲಿ ಪ್ರಧಾನವಾಗಿ ಮೇಲ್ಪಂತಿಯಲ್ಲಿ ಕಡ್ಡಾಯವಾಗಿ ಕನ್ನಡ ಭಾಷೆಯಲ್ಲಿ ಬರೆಯಿಸಬೇಕು ಎಂದು ಷರತ್ತು ವಿಧಿಸಿ ಪರವಾನಿಗೆಯನ್ನು ನೀಡಲಾಗಿದೆ. ಕರ್ನಾಟಕ ರಾಜ್ಯದಲ್ಲಿ ಕನ್ನಡ ಆಡಳಿತ ಹಾಗೂ ಜನಸಾಮಾನ್ಯರ ಭಾಷೆಯಾಗಿದೆ. ಸಾರ್ವಜನಿಕರಿಗೆ ಹಾಗೂ ಗ್ರಾಹಕರಿಗೆ ತಿಳಿಯುವಂತೆ ಕನ್ನಡ ಭಾಷೆಯಲ್ಲಿ ನಾಮಫಲಕಗಳನ್ನು ಅಳವಡಿಸಬೇಕು ಎಂದು ಅವರು ತಿಳಿಸಿದ್ದಾರೆ. ಎಲ್ಲಾ ವರ್ತಕರು ಆಧಾರ್ ಕಾರ್ಡ್ ಮತ್ತು ಬಾಡಿಗೆ ಕಾರಾರು ಪತ್ರ ನೀಡಿ ಕಡ್ಡಾಯವಾಗಿ 5 ವರ್ಷದ ಅವಧಿಗೆ ಉದ್ದಿಮೆ ಪರವಾನಿಗೆ ಪಡೆಯಬೇಕು. ಪರವಾನಿಗೆ ಅವಧಿ ಮುಗಿದವರು ತಕ್ಷಣವೇ ನಿಗಧಿತ ಶುಲ್ಕ ಪಾವತಿಸಿ ಪರವಾನಿಗೆಯನ್ನು ನವೀಕರಿಸಿಕೊಳ್ಳಬೇಕು ಎಂದು ಪೌರಾಯುಕ್ತೆ ಎಂ.ರೇಣುಕಾ ಕೋರಿದ್ದಾರೆ.

### ಸರ್ಕಾರಿ ನೌಕರರ ಸಂಘ ಸಮುದಾಯ ಭವನಕ್ಕೆ ಶಂಕುಸ್ಥಾಪನೆ

» ಚಳ್ಳಕೆರೆ

ತಾಲ್ಲೂಕು ಸರ್ಕಾರಿ ನೌಕರರ ಸಂಘದ ನೂತನ ಸಮುದಾಯ ಭವನ ಶಂಕುಸ್ಥಾಪನೆ, ಸರ್ವಸದಸ್ಯರ ಸಭೆ ಹಾಗೂ ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆ ಕಾರ್ಯಕ್ರಮವನ್ನು ಸರ್ಕಾರಿ ನೌಕರರ ಭವನದಲ್ಲಿ ಜ.11ರ ಗುರುವಾರ ಬೆಳಗ್ಗೆ 10ಕ್ಕೆ ಹಮ್ಮಿಕೊಂಡಿದೆ ಎಂದು ಪ್ರಧಾನ ಕಾರ್ಯದರ್ಶಿ ಬಿ.ವಿ.ರಮೇಶ್ ತಿಳಿಸಿದ್ದಾರೆ.
ನಗರದ ವಾಲ್ಮೀಕಿ ವೃತ್ತದಲ್ಲಿರುವ ಸರ್ಕಾರ ನೌಕರರ ಭವನದ ಮೇಲ್ಭಾಗದಲ್ಲಿ ನೂತನ ಸಮುದಾಯ ಭವನ ಶಂಕುಸ್ಥಾಪನೆ ಕಾರ್ಯವನ್ನು ಕ್ಷೇತ್ರದ ಶಾಸಕ ಟಿ.ರಘುಮೂರ್ತಿನೆರವೇರಿಸಲಿದ್ದು,ಅಧ್ಯಕ್ಷತೆಯನ್ನು ಸರ್ಕಾರಿ ನೌಕರರ ಸಂಘದ ತಾಲ್ಲೂಕು ಅಧ್ಯಕ್ಷ ಪಿ.ಎಲ್.ಲಿಂಗೇಗೌಡ ವಹಿಸುವರು. ನೂತನ ವರ್ಷದ ಕ್ಯಾಲೆಂಡರನ್ನು ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್.ಷಡಾಕ್ಷರಿ ಬಿಡುಗಡೆಗೊಳಿಸುವರು. ಕಾರ್ಯಕ್ರಮದಲ್ಲಿ ಕೇಂದ್ರ ಸಚಿವ ನಾರಾಯಣಸ್ವಾಮಿ, ಪಾಲ್ಗೊಳ್ಳುವರು.

### 30ಕ್ಕೂ ಹೆಚ್ಚು ಕಡೆಗಳಲ್ಲಿ ದಾಳಿ ದಾಖಲೆಗಳ ಪರಿಶೀಲನೆ

# 6 ಅಧಿಕಾರಿ ಮನೆ ಮೇಲೆ ಲೋಕ ದಾಳಿ

» ಚಿತ್ರದುರ್ಗ

ರಾಜ್ಯದಲ್ಲಿ ಮಂಗಳವಾರ ಬೆಳ್ಳಗ್ಗೆ ಕಣ್ಣು ಬಿಡುವಷ್ಟರಲ್ಲಿ ಗ್ರಾಮ ಪಂಚಾಯಿತಿ ಸದಸ್ಯ ಸೇರಿ ಸರ್ಕಾರಿ ಅಧಿಕಾರಿಗಳನ್ನು ಒಳಗೊಂಡ 6 ಕಡೆಗಳಲ್ಲಿ ಲೋಕಾಯುಕ್ತ ದಾಳಿ ನಡೆಸಲಾಯಿತು.ಬೆಳಗ್ಗೆಯಿಂದ ಆರಂಭವಾಗಿ ಸಂಜೆ ವೇಳೆಗೆ ದಾಳಿ ಮುಕ್ತಾಯಗೊಳಿಸಿದ್ದು, ಒಬ್ಬೊಬ್ಬರ ಬಳಿಯೂ ಕೋಟಿ, ಕೋಟಿ ರೂ. ಮೌಲ್ಯದ ಚರ ಮತ್ತು ಸ್ಥಿರಾಸ್ತಿ ಪತ್ತೆಯಾಗಿದೆ. ಒಟ್ಟು ಆರು ಜನರಿಂದ 51.11 ಕೋಟಿ ರೂ. ಮೌಲ್ಯದ ಸ್ಥಿರ ಮತ್ತು ಚರ ಆಸ್ತಿ ಪತ್ತೆಯಾಗಿದೆ ಎಂದು ಲೋಕಾಯುಕ್ತ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ರಾಜ್ಯದ 6 ಭ್ರಷ್ಟಾ ಅಧಿಕಾರಿಗಳ ಮೇಲೆ ಲೋಕಾಯುಕ್ತ ದಾಳಿಯಲ್ಲಿ ಒಟ್ಟು 35 ಸ್ಥಳಗಳಲ್ಲಿ ದಾಳಿ ಮಾಡಿ ಪರಿಶೀಲನೆ ಮಾಡಲಾಗಿತ್ತು. ಸಂಜೆ ವೇಳೆ ದಾಳಿ ಮುಕ್ತಾಯಗೊಂಡಿದೆ. ಲೋಕಾಯುಕ್ತರ ದಾಳಿ ವೇಳೆ ಪ್ರತಿಯೊಬ್ಬ ಅಧಿಕಾರಿ ಮನೆಯಲ್ಲಿಯೂ ಕೋಟಿ ಕೋಟಿ ಮೌಲ್ಯದ ಆಸ್ತಿ–ಪಾಸ್ತಿ ಪತ್ತೆಯಾಗಿದೆ. ಇನ್ನು ಕೇವಲ ನಗದು ಹಣ ಮಾತ್ರವಲ್ಲದೇ, ಚಿನ್ನ, ಬೆಳ್ಳಿ, ಹುಲಿ ಉಗುರು, ಶ್ರೀಗಂಧ ಸೇರಿ ಹಲವು ಸ್ಥಿತ, ಚರಾಸ್ತಿಗಳಿರುವ ಬಗ್ಗೆ ಮಾಹಿತಿ ನೀಡಿದ್ದಾರೆ.

ಕರ್ನಾಟಕದಲ್ಲಿ ಹಲವು ಬಾರಿ ಲೋಕಾಯುಕ್ತ ಇಲಾಖೆಯಿಂದ ಭ್ರಷ್ಟ ಅಧಿಕಾರಿಗಳಿಗೆ ಬಿಸಿ ಮುಟ್ಟಿಸುತ್ತಲೇ ಬಂದಿದ್ದು ಅಧಿಕಾರಿಗಳು ಮಾತ್ರ ಕೋಟಿ ಕೋಟಿ ಹಣ ಒಡೆಯುವ ಕೆಲಸದಲ್ಲಿ ನಿರತರಾಗಿದ್ದಾರೆ. ಆದರೆ ಲೋಕಯುಕ್ತ ಇಲಾಖೆಯವರು ಮಿತಿಮೀರಿ ಭ್ರಷ್ಟಾಚಾರವೆಸಗಿದ ಅಧಿಕಾರಿಗಳ ಮನೆಗಳ ದಾಳಿ ಮಾಡಿ ಎಲ್ಲ ದಾಖಲೆಗಳನ್ನು ಪರಿಶೀಲನೆ ಮಾಡುತ್ತದೆ. ಈ ವೇಳೆ ಆಸ್ತಿ ಗಳಿಕೆ ಸಕ್ರಮವಾಗಿದೆಯೇ ಎಂದು ಪರಿಶೀಲನೆ ಮಾಡುತ್ತಾರೆ. ಒಂದು ವೇಳೆ ನಿಗದಿತ ಆದಾಯಕ್ಕಿಂತ ಹೆಚ್ಚಿನ ಆಸ್ತಿ ಹೊಂದಿರುವುದು ಅಥವಾ ಹಣ ಗಳಿಕೆಯನ್ನು ಮಾಡಿದ್ದಲ್ಲಿ ಅದಕ್ಕೆ ದಾಖಲೆಗಳನ್ನು ಕೇಳುತ್ತದೆ. ಒಂದು ವೇಳೆ ಅಕ್ರಮದ ಹಾದಿಯಲ್ಲಿ ಆಸ್ತಿ ಗಳಿಗೆ ಮಾಡಿದ್ದ▯▯▯ ಅವರಿಗೆ ಶಿಕ್ಷೆ ನೀಡುವಲ್ಲಿಯೂ ಲೋಕಾಯುಕ್ತ ಇಲಾಖೆ ಪ್ರಮುಖ ಪಾತ್ರ ನಿರ್ವಹಿಸುತ್ತಿದೆ





### ಯಾರ ಬಳಿ ಎಷ್ಟು ಆಸ್ತಿ ಸಿಕ್ಕಿದೆ?

1 ಎಂ.ಎಲ್.ನಾಗರಾಜ್, ಚೀಫ್ ಜನರಲ್ ಮ್ಯಾನೇಜರ್, ಬೆಸ್ಕಾಂ, ಬೆಂಗಳೂರು (**6.37** ಕೋಟಿ ರೂ. ಮೌಲ್ಯದ ಸ್ಥಿರ & ಚರ ಆಸ್ತಿ ಪತ್ತೆ)

2 ಎನ್.ಸತೀಶ್ ಬಾಬು, PWD ಎಂಜಿನಿಯರ್, ಬೆಂಗಳೂರು. (**4.52** ಕೋಟಿ ರೂ. ಮೌಲ್ಯದ ಸ್ಥಿರ & ಚರ ಆಸ್ತಿ ಪತ್ತೆ)

3 ಹೆಚ್.ಎಸ್.ಸುರೇಶ್, ಗ್ರಾ.ಪಂ ಸದಸ್ಯ, ಚನ್ನೇನಹಳ್ಳಿ, ಬೆಂಗಳೂರು ದಕ್ಷಿಣ (**25.58** ಕೋಟಿ ರೂ. ಮೌಲ್ಯದ ಸ್ಥಿರ & ಚರ ಆಸ್ತಿ ಪತ್ತೆ)

4 ಡಿ.ಎಂ.ಪದ್ಮನಾಭ, PDO, ಕುಂದಾಣ, ದೇವನಹಳ್ಳಿ, (**5.98** ಕೋಟಿ ಮೌಲ್ಯದ ಸ್ಥಿರ & ಚರ ಆಸ್ತಿ ಪತ್ತೆ)

5 ಸೈಯದ್ ಮುನೀರ್ ಅಹಮದ್, AEE, KRIDL,KRIDL, ರಾಮನಗರ. (**5.48** ಕೋಟಿ ರೂ. ಮೌಲ್ಯದ ಸ್ಥಿರ & ಚರ ಆಸ್ತಿ ಪತ್ತೆ)

6 ಬಿ.ಮಂಜೇಶ್, ಜಂಟಿ ನಿರ್ದೇಶಕ, ನಗರ ಯೋಜನೆ, ಆನೇಕಲ್ (**3.18** ಕೋಟಿ ರೂ. ಮೌಲ್ಯದ ಸ್ಥಿರ & ಚರ ಆಸ್ತಿ ಪತ್ತೆ)

### ಗ್ರಾಪಂ ಸದಸ್ಯನ ಮನೆಯಲ್ಲಿ ಫಾರಿನ್ ಬ್ರ್ಯಾಂಡ್ ಎಣ್ಣೆ ಪತ್ತೆ

ಅಕ್ರಮ ಆಸ್ತಿಗಳಿಕೆ ಆರೋಪ ಕೇಳಿಬಂದ ಹಿನ್ನೆಲೆಯಲ್ಲಿ ಬೆಂಗಳೂರು ದಕ್ಷಿಣ ತಾಲೂಕಿನ ಚನ್ನೇನಹಳ್ಳಿ ಗ್ರಾಮ ಪಂಚಾಯಿತಿ ಸದಸ್ಯ ಸಿ.ಹೆಚ್ ಸುರೇಶ್ ಮನೆ ಮೇಲೆ ದಾಳಿ ನಡೆಸಲಾಗಿದೆ. ರಾಮನಗರ ಲೋಕಾಯುಕ್ತ ಡಿವೈಎಸ್ಪಿ ಗೌತಮ್ ನೇತೃತ್ವದಲ್ಲಿ ಸೀಗೆಹಳ್ಳಿ ಮನೆ ಮೇಲೆ ದಾಳಿ ನಡೆಸಲಾಗಿದೆ. ಈ ಸಂದರ್ಭದಲ್ಲಿ 500 ರೂ.ಗಳ ಕಂತೆ ನೋಟುಗಳು ಹಾಗೂ ವಿದೇಶಿ ಬ್ರ್ಯಾಂಡ್ ಮದ್ಯ ಪತ್ತೆಯಾಗಿದೆ.

### ಪಿಡಬ್ಲ್ಯೂಡಿ ಸೂಪರಿಂಟೆಂಡೆಂಟ್ ಎಂಜಿನಿಯರ್ ಸತೀಶ್ ಬಾಬು ಬಳಿ 4.52 ಕೋಟಿ ಆಸ್ತಿ




ಬೆಂಗಳೂರಿನ ಕೆ.ಆರ್.ವೃತ್ತದಲ್ಲಿರುವ ಲೋಕೋಪಯೋಗಿ ಇಲಾಖೆ ಕಚೇರಿಯ ಕಟ್ಟಡ ವೃತ್ತದ ಸೂಪರಿಂಟೆಂಡೆಂಟ್ ಎಂಜಿನಿಯರ್ ಎನ್.ಸತೀಶ್ ಬಾಬು ಅವರ ಬಳಿ ರೂ. 4.52 ಕೋಟಿ ಮೌಲ್ಯದ ಆಸ್ತಿ ಪತ್ತೆಯಾಗಿದೆ. ಇವರಿಗೆ ಸೇರಿದ 5 ಸ್ಥಳಗಳಲ್ಲಿ ಲೋಕಾಯುಕ್ತ ಪೊಲೀಸರು ಮಂಗಳವಾರ ಶೋಧ ಕಾರ್ಯ ನಡೆಸಿದರು. ಇದರಲ್ಲಿ 1 ನಿವೇಶನ, 2 ವಾಸದ ಮನೆಗಳು, 15 ಎಕರೆ ಕೃಷಿ ಜಮೀನು ಸೇರಿ ಒಟ್ಟು ರೂ.3.70 ಕೋಟಿ ಮೌಲ್ಯದ ಸ್ಥಿರಾಸ್ತಿ ಪತ್ತೆಯಾಗಿದೆ.ರೂ.9 ಲಕ್ಷ ನಗದು, ರೂ.64.62 ಲಕ್ಷ ಮೌಲ್ಯದ ಚಿನ್ನಾಭರಣ, ರೂ.8.70 ಲಕ್ಷ ಬೆಲೆಯ ವಾಹನಗಳು ಸೇರಿ ಒಟ್ಟು ರೂ. 82.32 ಲಕ್ಷ ಮೌಲ್ಯದ ಚರಾಸ್ತಿಗಳು ಪತ್ತೆಯಾಗಿವೆ.ಬಾಕ್ಸ್


ಪುಟ

## ಪ್ರಮುಖ ಸುದ್ದಿ

### ಟ್ರಾಲಿ ಬ್ಯಾಗ್ ನಲ್ಲಿ ಕೊಂದ ಮಗುವನ್ನು ತುಂಬಿ ಕಾರು ಹತ್ತಿದ ತಾಯಿ, ಚಿತ್ರದುರ್ಗದಲ್ಲಿ ಐಮಂಗಳ ಪೋಲಿಸರಿಂದ ತಾಯಿ ಬಂಧನ

# ನಾಲ್ಕು ವರ್ಷದ ಮಗುವನ್ನು ಕೊಂದ ಹೆತ್ತ ತಾಯಿ

» ಚಿತ್ರದುರ್ಗ









ಹೈ ಪ್ರೊಫೈಲ್ ಹಿನ್ನಲೆ ಹೊಂದಿರುವ ಸಿಇಒ ತನ್ನ ನಾಲ್ಕು ವರ್ಷದ ಮಗುವನ್ನು ಕೊಂದು ಚೀಲದಲ್ಲಿ ಹಾಕಿ ಗೋವಾದಿಂದ ಬೆಂಗಳೂರಿಗೆ ಟ್ಯಾಕ್ಸಿಯಲ್ಲಿ ಪ್ರಯಾಣಿಸುತ್ತಿದ್ದಾಗ ಪೊಲೀಸರಿಗೆ ಸಿಕ್ಕಿಬಿದ್ದ ಭೀಕರ ಘಟನೆ ನಡೆದಿದೆ.

ಇಡೀ ಪ್ರಕರಣ ಸಿನಿಮೀಯರುದಂತಿದೆ.ಬೆಂಗಳೂರು ಮೂಲದ ಹೈ ಪ್ರೊಫೈಲ್ ಉದ್ಯಮಿ ಮತ್ತು ಸ್ಟಾರ್ಟಪ್ ಸಂಸ್ಥೆಯಾಗಿರುವ ಮೈಂಡ್‌ಫುಲ್ ಅಲ್ ಲ್ಯಾಬ್ ನ ಸಿಇಒ ಸುಚನಾ ಸೇತ್(39) ಅವರನ್ನು ಕರ್ನಾಟಕದ ಚಿತ್ರದುರ್ಗದಲ್ಲಿ ಬಂಧಿಸಲಾಗಿದ್ದು, ಗೋವಾ ಪೊಲೀಸರು ಆಕೆಯನ್ನು ಬಂಧಿಸಿದ್ದಾರೆ. ಆಕೆಯ ಲಿಂಕ್ಡಿನ್ ಪ್ರೊಫೈ ಲಿನಲ್ಲಿ ಆಕೆ "ಎಐ ಎಥಿಕ್ಸ್ ಎಕ್ಸ್ಪರ್ಟ್ ಮತ್ತು AI ethics expert and on the list of 100 brilliant women in the AI ethics list" ಎಂದು ನಮೂದಿಸಲಾಗಿದೆ.

ಬೆಂಗಳೂರಿನಿಂದ ವಿಮಾನದ ಮೂಲಕ ಗೋವಾಕ್ಕೆ ಬಂದಿದ್ದ ಸುಚನಾ ಸೇತ್ ಉತ್ತರ ಗೋವಾದ ಕ್ಯಾಂಡೋಲಿಂನಲ್ಲಿರುವ ಹೊಟೇಲೊಂದರಲ್ಲಿ ಜನವರಿ 6 ರಂದು ತಡರಾತ್ರಿ ತನ್ನ ನಾಲ್ಕು ವರ್ಷದ ಮಗನೊಂದಿಗೆ ಚೆಕ್–ಇನ್ ಮಾಡಿದ್ದಾರೆ. ಆದರೆ ಜ.9 ಸೋಮವಾರ ಬೆಳಗ್ಗೆ ಚೆಕ್ ಔಟ್ ಮಾಡಿದಾಗ ಮಗು ಅವಳ ಜೊತೆ ಇಲ್ಲದನ್ನು ಸಿಬ್ಬಂದಿ ಗಮನಿಸಿದ್ದಾರೆ.

ಸೋಮವಾರ ಆಕೆ ಆತುರವಾಗಿ ಚೆಕ್ ಔಟ್ ಮಾಡಲು ಬಯಸಿದ್ದು , ಹೊಟೇಲ್ ರಿಸೆಪ್ಷನಿಸ್ಟ್ ಬಳಿ ಬೆಂಗಳೂರಿಗೆ ಟ್ಯಾಕ್ಸಿ ಬುಕ್ ಮಾಡಲು ತಿಳಿಸಿದ್ದಾರೆ. ಟ್ಯಾಕ್ಸಿ ದರಕ್ಕಿಂತ ಕಡಿಮೆ ಬೆಲೆಗೆ ವಿಮಾನ ಟಿಕೆಟ್ ಸಿಗುತ್ತಿದೆ ಎಂಬ ಅವರ ಹೊಟೇಲ್ ರಿಸೆಪ್ಷನಿಸ್ಟ್ ಸಲಹೆ ನಿರಾಕರಿಸಿ ಟ್ಯಾಕ್ಸಿಗೆ ಬುಕ್ ಮಾಡಲು ಒತ್ತಾಯಿಸಿ ಬಳಿಕ ಟ್ರಾಲಿ ಬ್ಯಾಗ್ ನೊಂದಿಗೆ ತೆರಳಿದ್ದಾಳೆ.

ಇನ್ನೊಂದೆಡೆ ಹೊಟೇಲ್ ರೂಂ ಸ್ವಚ್ಛಗೊಳಿಸಲು ರೂಮ್ ಬಾಯ್ ತೆರಳಿದಾಗ ಕೆಲವೆಡೆ ರಕ್ತದ ಕಲೆ ಕಂಡುಬಂದಿದ್ದು, ಹೊಟೇಲ್ ಸಿಬ್ಬಂದಿ ತಕ್ಷಣ ವಿಚಾರವನ್ನು ಪೊಲೀಸರಿಗೆ ತಲುಪಿಸಿದ್ದಾರೆ. ಕ್ಯಾಲಂಗುಟ್ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ಪರೇಶ್ ನಾಯಕ್ ತಂಡ ಬೆಳಿಗ್ಗೆ 11 ಗಂಟೆಯ ಸುಮಾರಿಗೆ ರಕ್ತದ ಕಲೆಯ ಬಗ್ಗೆ ಮಾಹಿತಿ ಪಡೆದು ಹೋಟೆಲ್‌ಗೆ ತಲುಪಿ ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲನೆ ಮಾಡಿದ್ದು ಮಗು ಆಕೆಯೊಂದಿಗೆ ಇಲ್ಲದಿರುವುದು ದೃಡಪಟ್ಟಿದೆ.ಟ್ಯಾಕ್ಸಿಯಲ್ಲಿ ತೆರಳುತ್ತಿದ್ದಂತೆ ಸುಚನಾಳಿಗೆತಕ್ಷಣಕರೆಮಾಡಿದಪೊಲೀಸರು ಆಕೆಯ ಮಗನ ಬಗ್ಗೆ ವಿಚಾರಿಸಿದ್ದಾರೆ. ಆಕೆ ಯಾವುದೇ ಅನುಮಾನ ಬಾರದಂತೆ ತನ್ನ ಮಗು ಫಟೋರ್ಡಾದಲ್ಲಿ ತನ್ನ ಸ್ನೇಹಿತ ಮನೆಯಲ್ಲಿದ್ದಾಳೆಂದು ಸುಳ್ಳು ವಿಳಾಸವನ್ನು ನೀಡಿದ್ದಾಳೆ ತಡ ಮಾಡದ ಪೊಲೀಸರು ವಿಳಾಸ ಪರಿಶೀಲಿಸಿದಾಗ ಅದು ನಕಲಿಯಾಗಿತ್ತು. ಮತ್ತಷ್ಟು ಅನುಮಾನಗೊಂಡ ಇನ್ಸ್‌ಪೆಕ್ಟರ್ ಪರೇಶ್ ನಾಯಕ್ ಟ್ಯಾಕ್ಸಿ ಡ್ರೈವರ್‌ಗೆ ಮತ್ತೆ ಕರೆ ಮಾಡಿ, ಈ ಬಾರಿ ಕೊಂಕಣಿಯಲ್ಲಿ ಮಾತನಾಡುತ್ತಾ,ಪ್ರಯಾಣಿಕೆಗೆಅನುಮಾನ ಬಾರದಂತೆ ಹತ್ತಿರದ ಪೊಲೀಸ್ ಠಾಣೆಗೆ ಹೋಗುವಂತೆ ತಿಳಿಸಿದ್ದಾರೆ.ಅಷ್ಟರಲ್ಲಾಗಲೇ ಟ್ಯಾಕ್ಸಿ ಚಿತ್ರದುರ್ಗ ಜಿಲ್ಲೆಯನ್ನು ಪ್ರವೇಶಿಸಿತ್ತು. ಡ್ರೈವರ್ ಸುಚನಾಗೆ ತಿಳಿಯದಂತೆ ಕಾರನ್ನು ಐಮಂಗಲ ಪೊಲೀಸ್ ಠಾಣೆಗೆ ತಿರುಗಿಸಿದ್ದಾನೆ. ಈ ವೇಳೆ ಅಲ್ಲಿದ್ದ ಪೊಲೀಸ್ ಅಧಿಕಾರಿ ಕಾರಿನಲ್ಲಿದ್ದ ಬ್ಯಾಗ್‌ನ್ನು ಪರಿಶೀಲಿಸಿದಾಗ ನಾಲ್ಕು ವರ್ಷದ ಮಗುವಿನ ಶವ ಕಂಡು ಬೆಚ್ಚಿಬಿದ್ದಿದ್ದಾರೆ.ಸೋಮವಾರ ಸಂಜೆಯೇ ಪೊಲೀಸ್ ಪರೇಶ್ ನಾಯಕ್ ಅವರು ತಮ್ಮ ತಂಡದೊಂದಿಗೆ ಚಿತ್ರದುರ್ಗಕ್ಕೆ ಆಗಮಿಸಿ ಆರೋಪಿ. ತಾಯಿಯನ್ನು ಬಂಧಿಸಿ ಗೋವಾಕ್ಕೆ ಕರೆದೊಯ್ದಿದ್ದಾರೆ.

ವಿಚ್ಚೇದಿತ ಪತಿ ಮಗುವಿನ ಜತೆ ಮಾತನಾಡಬಾರದು ಎಂಬ ಕಾರಣಕ್ಕಾಗಿ ಸುಚನಾ ಮಗುವಿನ ಹತ್ಯೆಗೈದಿರುವುದಾಗಿ ತಿಳಿದು ಬಂದಿದೆ. 2010ರಲ್ಲಿ ವಿವಾಹವಾಗಿದ್ದ ದಂಪತಿಗೆ 2019ರಲ್ಲಿ ಗಂಡು ಮಗು ಜನಿಸಿತ್ತು. ಇಬ್ಬರ ನಡುವಿನ ವಿರಸದಿಂದಾಗಿ 2020ರಲ್ಲಿ ವಿವಾಹ ವಿಚ್ಛೇದನ ಪಡೆದುಕೊಂಡಿದ್ದರು. ಆದರೆ ಪ್ರತಿ ಭಾನುವಾರ ಮಗುವನ್ನು ಭೇಟಿಯಾಗಲು ತಂದೆಗೆ ಕೋರ್ಟ್ ಅನುಮತಿ ನೀಡಿತ್ತು.





## ಫಾಸ್ಟ್ ನ್ಯೂಸ್

### 16ಕ್ಕೆ ಜಿ.ಪಂ ಕೆಡಿಪಿ ಸಭೆ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲಾ ಪಂಚಾಯತ್ 2023-24ನೇ ಸಾಲಿನ ಡಿಸೆಂಬರ್ ಅಂತ್ಯದವರೆಗಿನ ಕೆ.ಡಿ.ಪಿ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯನ್ನು ಇದೇ ಜನವರಿ 16ರಂದು ಬೆಳಿಗ್ಗೆ 11ಕ್ಕೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಸಭೆಯ ಅಧ್ಯಕ್ಷತೆ ವಹಿಸುವರು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ತಿಳಿಸಿದ್ದಾರೆ.

### ವಿನಯ್‌ಗೆ ಪಿಹೆಚ್‌ಡಿ

» ಚಿತ್ರದುರ್ಗ



ಚಿತ್ರದುರ್ಗ ಜಿಲ್ಲೆ, ಹೊಳಲ್ಕೆರೆ ತಾಲ್ಲೂಕು ತಾಳೀಕಟ್ಟೆ ಗ್ರಾಮದ ಎಂ.ಕೆ.ವಿನಯ್ ಅವರ 'ಪ್ರಾಚೀನ ಕರ್ನಾಟಕದಲ್ಲಿ ಪಶುಪಾಲನೆ ಮತ್ತು ಪಶು ಸಂಬಂಧಿತ ಸಂಘರ್ಷಗಳು' ಎಂಬ ಮಹಾಪ್ರಬಂಧವು ಹಂಪಿ ಕನ್ನಡ ವಿಶ್ವ ವಿದ್ಯಾಲಯ ಪಿ.ಹೆಚ್.ಡಿ ಪದವಿ ಭಾಜನವಾಗಿದೆ. ಹಂಪಿ ಕನ್ನಡ ವಿಶ್ವ ವಿದ್ಯಾಲಯದ ಬುಡಕಟ್ಟು ಅಧ್ಯಯನ ವಿಭಾಗದ ಹಿರಿಯ ಪ್ರಾಧ್ಯಾಪಕ ಡಾ.ಗಂಗಾಧರ ದೈವಜ್ಞ ಅವರ ಮಾರ್ಗದರ್ಶನದಲ್ಲಿ ಎಂ.ಕೆ.ವಿನಯ್ ತಮ್ಮ ಸಂಶೋಧನಾ ಮಹಾಪ್ರಬಂಧ ರಚಿಸಿ, ವಿಶ್ವ ವಿದ್ಯಾಲಯದ ಶಾಸನಶಾಸ್ತ್ರ ವಿಭಾಗಕ್ಕೆ ಸಲ್ಲಿಸಿದ್ದರು. ವಿಶ್ವ ವಿದ್ಯಾಲಯದ ಪರೀಕ್ಷಾ ಮಂಡಳಿ, ಕನ್ನಡ ವಿಶ್ವ ವಿದ್ಯಾಲಯ ಅಧಿನಿಯಮ ಹಾಗೂ ಪಿ.ಹೆಚ್.ಡಿ ಪದವಿ ನಿಯಮಗಳ ಅನುಸಾರ ಎಂ.ಕೆ.ವಿನಯ್ ಅವರ 'ಪ್ರಾಚೀನ ಕರ್ನಾಟಕದಲ್ಲಿ ಪಶುಪಾಲನೆ ಮತ್ತು ಪಶು ಸಂಬಂಧಿತ ಸಂಘರ್ಷಗಳು' ಎಂಬ ಮಹಾಪ್ರಬಂಧ ಅತ್ಯುತ್ತಮ ಶ್ರೇಣಿಯದ್ದು ಎಂದು ಪರಿಗಣಿಸಿ ಪಿ.ಹೆಚ್.ಡಿ ಪದವಿಯನ್ನ ನೀಡಿದೆ.ಜ. 10 ರಂದು ಜರುಗಲಿರುವ ಕನ್ನಡ ವಿಶ್ವ ವಿದ್ಯಾಲಯದ 32ನೇ ಘಟಿಕೋತ್ಸವದಲ್ಲಿ ರಾಜ್ಯಪಾಲ ಹಾಗೂ ಕುಲಾಧಿಪತಿ ಥಾವರ್ ಚಂದ್ ಗೆಹ್ಲೋಟ್, ಕುಲಪತಿ ಡಾ. ಡಿ.ವಿ. ಪರಮಶಿವಮೂರ್ತಿ, ಕುಲಚಿವ ಡಾ. ವಿಜಯ್ ಪೂಣಚ್ಚ ತಂಬಂಡ ಅವರ ಸಮ್ಮುಖದಲ್ಲಿ ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್, ಎಂ.ಕೆ.ವಿನಯ್ ಅವರಿಗೆ ಪದವಿಯನ್ನು ಪ್ರಧಾನ ಮಾಡಲಿದ್ದಾರೆ.

### ವ್ಯಕ್ತಿ ಕಾಣೆ

» ಚಿತ್ರದುರ್ಗ



ಚಿತ್ರದುರ್ಗ ನಗರದ ಕೆಳಗೋಟೆ ನಿವಾಸಿ, ಚಳ್ಳಕೆರೆ ತಾಲ್ಲೂಕು ದುರ್ಗಾವರ ಗ್ರಾಮ ಲೆಕ್ಕಾಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಜಿ. ನಾಗರಾಜ್ ಎಂಬ ವ್ಯಕ್ತಿಯು ಕಾಣೆಯಾಗಿರುವ ಪ್ರಕರಣ 2024ರ ಜನವರಿ 5ರಂದು ಚಳ್ಳಕೆರೆ ಪೋಲೀಸ್ ಠಾಣೆಯಲ್ಲಿ ದಾಖಲಾಗಿದೆ. ಕಾಣೆಯಾದ ವ್ಯಕ್ತಿಯ ಚಹರೆ ಇಂತಿದೆ. ನಾಗರಾಜ್.ಜಿ (48ವರ್ಷ) ತಂದೆ ಗೋಪಾಲಪ್ಪ, 5.2 ಅಡಿ ಎತ್ತರ, ದುಂಡು ಮುಖ, ಸಾಧಾರಣ ಮೈಕಟ್ಟು, ಕಪ್ಪು ಮೈ ಬಣ್ಣ ಹೊಂದಿದ್ದು, ಎಡಗೈ ಮೇಲೆ ಖ ಎಂಬ ಹಚ್ಚೆ ಗುರುತು ಇರುತ್ತದೆ. ಕನ್ನಡ ಮತ್ತು ತೆಲುಗು ಭಾಷೆ ಮಾತನಾಡುತ್ತಾರೆ. ಕಾಣೆಯಾದ ಸಮಯದಲ್ಲಿ ಹಳದಿ ಬಣ್ಣದ ಶರ್ಟ್ ಮತ್ತು ಬ್ರೌನ್ ಕಲರ್ ಫ್ಯಾಂಟ್ ಧರಿಸಿರುತ್ತಾರೆ.ಈ ಮೇಲ್ಕಂಡ ಚಹರೆಯುಳ್ಳ ವ್ಯಕ್ತಿಯ ಕುರಿತು ಮಾಹಿತಿ ತಿಳಿದು ಬಂದಲ್ಲಿ ಚಳ್ಳಕೆರೆ ಪೊಲೀಸ್ ಠಾಣೆ 08195-250239, ಪೋಲೀಸ್ ನಿರೀಕ್ಷಕರು- 7892537146, ಜಿಲ್ಲಾ ನಿಸ್ತಂತು ಕೇಂದ್ರ 08194-222782 ಗೆ ಸಂಪರ್ಕಿಸಬಹುದು ಎಂದು ಚಳ್ಳಕೆರೆ ಪೊಲೀಸ್ ಠಾಣೆ ಪೊಲೀಸ್ ಉಪನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಿದ್ಯಾರ್ಥಿ ಆತ್ಮಹತ್ಯೆ

» ಚಳ್ಳಕೆರೆ



ವಿದ್ಯಾರ್ಥಿ ಮನೆಯಲ್ಲಿ ಆತ್ಮಹತ್ಯೆಗೆ ಶರಗಾಗಿರುವ ಘಟನೆ ಚಳ್ಳಕೆರೆ ನಗರದಲ್ಲಿ ನಡೆದಿದೆ. ಚಳ್ಳಕೆರೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಚಳ್ಳಕೆರೆ ನಗರದ ವಾಸವಿ ಕಾಲೋನಿಯ ವೆಂಕಟೇಶ ಎಂಬುವರ ಪುತ್ರ ಮುಕುಂದ ಸುಮಾರು 15 ವರ್ಷ ಇವನು ವಾಸವಿ ವಿದ್ಯಾಸಂಸ್ಥೆಯಲ್ಲಿ ಹತ್ತನೇ ತರಗತಿ ವ್ಯಾಸಂಗ ಮಾಡುತ್ತಿದ್ದ ಎನ್ನಲಾಗಿದೆ. ಅವರ ಮನೆಯಲ್ಲಿ ಆತ್ಮಹತ್ಯೆಗೆ ಶರಣಾಗಿದ್ದಾನೆ. ಮೃತ ವಿದ್ಯಾರ್ಥಿ ವ್ಯಾಸಂಗದಲ್ಲಿ ಶಾಲೆಗೆ ಪ್ರಥಮ ಹಾಗೂ ಚೆಸ್ ಆಟದಲ್ಲಿ ರಾಜ್ಯ ಮಟ್ಟದ ಕ್ರೀಡಾಪಟು ಎನ್ನಲಾಗಿದೆ. ಮೃತನ ಕುಟುಂಬಸ್ಥರು ಚಳ್ಳಕೆರೆ ಠಾಣೆಗೆ ಮಾಹಿತಿ ನೀಡಿದ್ದಾರೆ ಸ್ಥಳಕ್ಕೆ ಪೋಲಿಸರು ಭೇಟಿ ನೀಡಿ ಪ್ರಕರ ದಾಖಲು ಮಾಡಿಕೊಂಡಿದ್ದಾರೆ.

### ಆಕ್ಷೇಪಣೆ ಆಹ್ವಾನ

» ಹೊಸಪೇಟೆ

ರಾಷ್ಟ್ರೀಯ ಆರೋಗ್ಯ ಅಭಿಯಾನ ಎನ್‌ಟಿಇಪಿ ಕಾರ್ಯಕ್ರಮದಡಿಯಲ್ಲಿ ವಿಜಯನಗರ ಜಿಲ್ಲೆಯ ಹುದ್ದೆಗೆ ತಾತ್ಕಾಲಿಕ ಆಯ್ಕೆ ಪಟ್ಟಿಗೆ ಆಕ್ಷೇಪಣೆ ಆಹ್ವಾನಿಸಲಾಗಿದೆ. ಹಿರಿಯ ಡಾ.ಟಿಬಿ ಹೆಚ್‌ಐವಿ ಮೇಲ್ವಿಚಾರಕರು(ಜಿಲ್ಲೆಯ ಪಿಎಮ್‌ಡಿಟಿ ಟಿಬಿ-ಹೆಚ್‌ಐವಿ ಕೋ-ಆರ್ಡಿನೇಟರ್) ಹುದ್ದೆಗೆ ನೇಮಕಾತಿಯ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿಗಳ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ.

# ಜ.15ರಂದು ಶ್ರೀ ಶಿವಯೋಗಿ ಸಿದ್ದರಾಮೇಶ್ವರ ಜಯಂತಿ ಸರಳ ಹಾಗೂ ಅರ್ಥಪೂರ್ಣ ಆಚರಣೆಗೆ ನಿರ್ಧಾರ

» ಚಿತ್ರದುರ್ಗ



ಶಿವಯೋಗಿ ಸಿದ್ದರಾಮೇಶ್ವರ ಜಯಂತಿಯನ್ನು ಇದೇ ಜನವರಿ 15 ರಂದು ಬೆಳಿಗ್ಗೆ 11.30ಕ್ಕೆ ಚಿತ್ರದುರ್ಗ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸರಳ ಹಾಗೂ ಅರ್ಥಪೂರ್ಣವಾಗಿ ಆಚರಿಸಲು ತೀರ್ಮಾನಿಸಲಾಯಿತು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಶ್ರೀ ಶಿವಯೋಗಿ ಸಿದ್ದರಾಮೇಶ್ವರ ಜಯಂತಿ ಅಂಗವಾಗಿ ನಡೆದ ಪೂರ್ವಸಿದ್ಧತಾ ಸಭೆಯಲ್ಲಿ ಕಾರ್ಯಕ್ರಮದ ತಯಾರಿ ಕುರಿತು ಚರ್ಚಿಸಲಾಯಿತು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ. ಮಲ್ಲಿಕಾರ್ಜುನ ಮಾತನಾಡಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಚಿತ್ರದುರ್ಗ ನಗರಸಭೆ ವತಿಯಿಂದ ಶ್ರೀ ಶಿವಯೋಗಿ ಸಿದ್ದರಾಮೇಶ್ವರ ಜಯಂತಿಯನ್ನು ಜ. 15 ರಂದು ಜಿಲ್ಲಾ ಕೇಂದ್ರದಲ್ಲಿ ಆಚರಿಸಲಾಗುವುದು. ಸರ್ಕಾರದ ಶಿಷ್ಟಾಚಾರದಅನುಸಾರವಾಗಿಆಹ್ವಾನಪತ್ರಿಕೆ ಮುದ್ರಿಸಿ, ಜನಪ್ರತಿನಿಧಿಗಳನ್ನು ಜಯಂತಿ ಕಾರ್ಯಕ್ರಮಕ್ಕೆ ಆಹ್ವಾನಿಸಲಾಗುವುದು. ಜಯಂತಿ ಅಂಗವಾಗಿ ಗೀತಗಾಯನ ಹಾಗೂ ಸಂಪನ್ಮೂಲ ವ್ಯಕ್ತಿಗಳಿಂದ ಶಿವಯೋಗಿ ಶ್ರೀ ಸಿದ್ದರಾಮೇಶ್ವರರ ಕುರಿತು ವಿಶೇಷ ಉಪನ್ಯಾಸ ಏರ್ಪಡಿಸಲಾಗುವುದು ಎಂದು ತಿಳಿಸಿದರು.

ಜಿಲ್ಲಾ ಭೋವಿ ಸಮಾಜದ ನಿರ್ದೇಶಕರು ಹಾಗೂ ಹೊಳಲ್ಕೆರೆ ತಾಲ್ಲೂಕು ಘಟಕದ ಅಧ್ಯಕ್ಷ ಡಿ.ಸಿ.ಮೋಹನ್ ಮಾತನಾಡಿ, ಸಮಾಜದ ವತಿಯಿಂದ ಇದೇ ಜನವರಿ 28 ರಂದು ಚಿತ್ರದುರ್ಗ ನಗರದಲ್ಲಿ ಅದ್ದೂರಿಯಾಗಿ ರಾಜ್ಯ ಮಟ್ಟದ ಶ್ರೀ ಸಿದ್ದರಾಮೇಶ್ವರ ಜಯಂತಿ ಆಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ರಾಜ್ಯದ ಮುಖ್ಯಮಂತ್ರಿಗಳು ಅಂದು ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದು ತಿಳಿಸಿದ ಅವರು, ಜಿಲ್ಲಾಡಳಿತದ ವತಿಯಿಂದಆಚರಿಸುವಶ್ರೀಸಿದ್ದರಾಮೇಶ್ವರ ಜಯಂತಿಯನ್ನು ಸರಳ ಹಾಗೂ ಅರ್ಥಪೂರ್ಣವಾಗಿ ಆಚರಿಸುವಂತೆ ಸಲಹೆ ನೀಡಿದರು.ಸರ್ಕಾರದ ವತಿಯಿಂದ ಆಚರಿಸುವ ಶ್ರೀ ಸಿದ್ದರಾಮೇಶ್ವರ ಜಯಂತಿ ಕಾರ್ಯಕ್ರಮಕ್ಕೆ ವಿವಿಧ ಇಲಾಖೆಗಳ ಸರ್ಕಾರಿ ಅಧಿಕಾರಿಗಳು ಕಡ್ಡಾಯವಾಗಿ ಭಾಗವಹಿಸಬೇಕು ಎಂದು ಮನವಿ ಮಾಡಿದರು.ಸಭೆಯಲ್ಲಿ ಜಿಲ್ಲಾ ಭೋವಿ ಸಂಘದ ಅಧ್ಯಕ್ಷ ತಿಪ್ಪೇಸ್ವಾಮಿ, ಕಾರ್ಯದರ್ಶಿ ಹೆಚ್.ಲಕ್ಷ್ಮಣ್, ಖಜಾಂಚಿ ಇ.ಮಂಜುನಾಥ, ಮುಖಂಡರಾದ ಜಿ.ತಿಪ್ಪೇಸ್ವಾಮಿ, ಭರತ್, ಚಂದ್ರಶೇಖರ್, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕಹರೀಶ್,ಪೊಲೀಸ್‌ಇಲಾಖೆಯ ಸಿಪಿಐ ಗುಡ್ಡಪ್ಪ, ರಂಗನಿರ್ದೇಶಕ ಕೆಪಿಎಂ ಗಣೇಶಯ್ಯ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

### ಜ. 19 ರಂದು ಮಹಾಯೋಗಿ ವೇಮನ ಜಯಂತಿ

ಚಿತ್ರದುರ್ಗ: ಮಹಾಯೋಗಿ ವೇಮನ ಜಯಂತಿಯನ್ನು ಇದೇ ಜನವರಿ 19 ರಂದು ಬೆಳಿಗ್ಗೆ 10.30ಕ್ಕೆ ಚಿತ್ರದುರ್ಗ ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಆಚರಿಸಲು ತೀರ್ಮಾನಿ ಸಲಾಯಿತು. ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಮಹಾಯೋಗಿ ವೇಮನ ಜಯಂತಿ ಆಚರಣೆ ಸಂಬಂಧ ಪೂರ್ವಸಿದ್ಧತಾ ಸಭೆ ನಡೆಯಿತು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಮಲ್ಲಿಕಾರ್ಜುನ್ ಮಾತನಾಡಿ, ಸರ್ಕಾರದ ಶಿಷ್ಟಾಚಾರದ ಅನುಸಾರವಾಗಿ ಮಹಾಯೋಗಿ ವೇಮನ ಜಯಂತಿ ಆಚರಿಸಲಾಗುವುದು. ಮಹಾಯೋಗಿ ವೇಮನರ ಕುರಿತು ಸಂಪನ್ಮೂಲ ವ್ಯಕ್ತಿಗಳಿಂದ ವಿಶೇಷ ಉಪನ್ಯಾಸ ಏರ್ಪಡಿಸಲಾಗುವುದು.

### ಪೂರ್ವಭಾವಿ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿಕೆ

## ಶರಣರ ತತ್ವ ಸಾರುವ ನಿಟ್ಟಿನಲ್ಲಿ ಅಂಬಿಗರ ಚೌಡಯ್ಯ ಜಯಂತಿ

» ಚಿತ್ರದುರ್ಗ



ಶರಣರ ತತ್ವಗಳನ್ನು ಸಾರುವ ನಿಟ್ಟಿನಲ್ಲಿ ಇದೇ ಜನವರಿ 21ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಿಜಶರಣ ಅಂಬಿಗರ ಚೌಡಯ್ಯ ಜಯಂತಿಯನ್ನು ಆಚರಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ಮಂಗಳವಾರ ಈ ಕುರಿತು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬಸವಣ್ಣನ ಸಮಕಾಲೀನನಾಗಿ ಶರಣ ತತ್ವವನ್ನು ಸಂಪೂರ್ಣವಾಗಿ ಪಾಲಿಸಿ, ನಿಜಶರಣ ಎಂಬ ಬಿರುದನ್ನು ಅಂಬಿಗರ ಚೌಡಯ್ಯ ಪಡೆದಿದ್ದರು. ಕಾಯಕ ತತ್ವದ ಜೊತೆಗೆ ತಮ್ಮ ವಚನಗಳ ಮೂಲಕ ಸಮಾಜದಲ್ಲಿ ಬದಲಾವಣೆ ಮೂಡಲು ಅಂಬಿಗರ ಚೌಡಯ್ಯ ಕಾರಣರಾಗಿದ್ದಾರೆ. ಇಂತಹ ಮಹನೀಯರ ಜೀವನ ಚರಿತ್ರೆ, ವಚನಗಳು ಹಾಗೂ ತತ್ವಗಳನ್ನು ಮುಂದಿನ ಪೀಳಿಗೆಗೆ ತಿಳಿಸಬೇಕಿದೆ. ಈ ನಿಟ್ಟಿನಲ್ಲಿ ಸರ್ಕಾರದಿಂದ ಜಯಂತಿ ಆಚರಿಸಲಾಗುತ್ತಿದೆ ಎಂದರು.

ಜಿಲ್ಲಾ ಗಂಗಾಂಭಿಕ ಬೆಸ್ತರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಹೆಚ್.ಡಿ.ರಂಗಪ್ಪ ಮಾತನಾಡಿ, ಜಯಂತಿ ಆಚರಣೆ ಕುರಿತು ಸಮಾಜದ ಸಭೆ ಕರೆದು ಚರ್ಚಿಸಲಾಗಿದೆ. ರಾಜ್ಯದಲ್ಲಿ ಭೀಕರ ಬರಗಾಲ ಇರುವುದರಿಂದ ಅಂಬಿಗರ ಚೌಡಯ್ಯನವರ ಜಯಂತಿಯನ್ನು ಸರಳ ಹಾಗೂ ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದೆ ಎಂದರು.

ಜಯಂತಿ ಅಂಗವಾಗಿ ಶಿಷ್ಟಾಚಾರದ ಅನುಸಾರ ಆಹ್ವಾನ ಪತ್ರಿಕೆ ಮುದ್ರಿಸಲಾಗುವುದು. ಜ.21ರಂದು ಭಾನುವಾರ ಅಂಬಿಗರ ಚೌಡಯ್ಯ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಲಾಗುವುದು. ಇದೇ ಸಂದರ್ಭದಲ್ಲಿ ಸಂಗೀತ ಕಾರ್ಯಕ್ರಮ ಹಾಗೂ ನಿಜಶರಣ ಅಂಬಿಗರ ಚೌಡಯ್ಯನವರ ಕುರಿತು ಉಪನ್ಯಾಸ ಏರ್ಪಡಿಸಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ ಹೇಳಿದರು.

ಸಭೆಯಲ್ಲಿ ಸಮಾಜ ಮುಖಂಡರಾದ ಕೃಷ್ಣಮೂರ್ತಿ, ಶ್ರೀನಿವಾಸ್, ಕೆಂಚಪ್ಪ, ಬಿ.ಹನುಮಂತಪ್ಪ, ಮೂರ್ತಿ, ಆರ್.ಪ್ರಕಾಶ್, ಶಿವಕುಮಾರ್ ನಗರ ಸಭೆ ಮಾಜಿ ಸದಸ್ಯ ಜೆ.ಮಹೇಶ್, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಹರೀಶ್, ಶಿಕ್ಷಣ ಇಲಾಖೆ ಚಿದಾನಂದ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು

### ಇಂಡಿಯಾನಾ ಹಾರ್ಟ್ ಸೆಂಟರ್ ಉಚಿತ ಹೃದಯ ತಪಾಸಣಾ ಶಿಬಿರ





» ಪರಶುರಾಂಪುರ

ಗ್ರಾಮದ ಗ್ರಾಪಂ ಆವರಣದಲ್ಲಿ ಮಂಗಳವಾರ ಇಂಡಿಯಾನ ಎಸ್ ಜೆ ಎಂ ಹಾರ್ಟ್ ಸೆಂಟರ್ ಹಾಗೂ ಸ್ಥಳೀಯ ಗ್ರಾಪಂ ಸಂಯುಕ್ತಾಶ್ರಯದಲ್ಲಿ ಉಚಿತ ಹೃದಯ ತಪಾಸಣಾ ಶಿಬಿರ ನಡೆಸಲಾಯಿತು.

ಶಿಬಿರವನ್ನ ಗ್ರಾಪಂ ಅಧ್ಯಕ್ಷ ಜಗಲೂರುಸ್ವಾಮಿ ಉದ್ಘಾಟಿಸಿ ಮಾತನಾಡಿ ,ಗ್ರಾಮೀಣ ಪ್ರದೇಶದ ಬಡ ಹಾಗೂ ಮಧ್ಯಮ ವರ್ಗದ ಜನರು ತಮ್ಮ ಬಿಡುವಿಲ್ಲದ ದಿನಚರಿಯಿಂದಾಗಿ ಆರೋಗ್ಯದ ಕಡೆಗೆ ಗಮನ ನೀಡದೆ ತೊಂದರೆಗೆ ಸಿಲುಕುತ್ತಿದ್ದಾರೆ, ತಂತ್ರಜ್ಞಾನ ಬೆಳದಂತೆ ಒತ್ತಡದ ಬದುಕು ಹಾಗೂ ಬದಲಾಗುತ್ತಿರುವ ಜೀವನದ ಕ್ರಮ, ಆಹಾರ ಪದ್ದತಿ, ಕೃಷಿಯಲ್ಲಿ ರಾಸಾಯನಿಕಗಳ ಅತಿಯಾದ ಬಳಕೆಯಿಂದಾಗಿ ಜನಸಾಮಾನ್ಯರು ಇಂದು ಅನೇಕ ಆರೋಗ್ಯ ಸಮಸ್ಯೆಯಿಂದ ಬಳಲುವಂತಾಗಿದೆ. ಗ್ರಾಮದ ಜನತೆಗೆ ಇಂಡಿಯಾನ ಎಸ್ ಜೆ ಎಂ ಹಾರ್ಟ್ ಸೆಂಟರ್ ಉಚಿತವಾಗಿ ಹೃದಯ ತಪಾಸಣಾ ಶಿಬಿರ ಹಮ್ಮಿಕೊಂಡಿರುವುದು ಶ್ಲಾಘನೀಯ ಎಂದರು.ಶಿಬಿರದಲ್ಲಿ ಉಚಿತವಾಗಿ ಹೃದಯ ತಪಾಸಣೆ. ಇದರಲ್ಲಿ ಬಿಪಿ, ಜಿಆರ್‌ಬಿಎಸ್, 2ಡಿ ಎಕೋ, ಇಸಿಜಿ ತಪಾಸಣೆ ನಡೆಸಿ ಹಾಗೂ ತಜ್ಞ ವೈದ್ಯರೊಂದಿಗೆ ಸಮಾಲೋಚನೆ ನಡೆಸಲಾಯಿತು. ಇಂಡಿಯಾನ ಎಸ್ ಜೆ ಎಂ ಹಾರ್ಟ್ ಸೆಂಟರ್ ಹೃದಯ ಹೃದಯ ತಜ್ಞರಾದ ಡಾ.ಜಿ.ಮಂಜುನಾಥ,ಗ್ರಾಪಂ ಅಧ್ಯಕ್ಷ ಜಗಲೂರು ಸ್ವಾಮಿ , ಪಿಡಿಒ ಗುಂಡಪ್ಪ,ಗ್ರಾಪಂ ಸದಸ್ಯರು , ಮುಖಂಡರು ,ಇಂಡಿಯಾನಾ ಎಸ್‌ಜೆಎಂ ಹಾರ್ಟ್ ಸೆಂಟರ್ ಹಾಗೂ ಗ್ರಾಪಂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

# ನಕಲಿಜಾತಿ ಪ್ರಮಾಣಪತ್ರಕ್ಕೆ ಕಡಿವಾಣ ಹಾಕದಿದ್ದರೆ, ಹೋರಾಟ: ವಾಲ್ಮೀಕಿ ಪ್ರಸನ್ನಾನಂದ ಶ್ರೀ ಹೇಳಿಕೆ

» ಹೊಸದುರ್ಗ



ಕಳೆದ ಹಲವಾರು ವರ್ಷಗಳಿಂದ ರಾಜ್ಯದಲ್ಲಿ ಎಸ್ಸಿ,ಎಸ್ಟಿ ನಕಲಿ ಜಾತಿ ಪ್ರಮಾಣ ಪತ್ರದ ಹಾವಳಿ ಹೆಚ್ಚಾಗಿದ್ದು, ಸರ್ಕಾರ ಇದಕ್ಕೆ ಕಡಿವಾಣ ಹಾಕದಿದ್ದರೆ, ರಾಜ್ಯದ್ಯಂತ ಹೋರಾಟ ನಡೆಸಲಾಗುವುದು ಎಂದು ಸರ್ಕಾರಕ್ಕೆ ರಾಜನಹಳ್ಳಿ ವಾಲ್ಮೀಕಿ ಗುರುಪೀಠದ ಶ್ರೀ ಪ್ರಸನ್ನಾನಂದ ಸ್ವಾಮೀಜಿ ಎಚ್ಚರಿಕೆ ನೀಡಿದರು.

ರಾಜನಹಳ್ಳಿಯ ವಾಲ್ಮೀಕಿ ಗುರುಪೀಠದಲ್ಲಿ ನಡೆಯಲಿರುವ 2024 ರ ವಾಲ್ಮೀಕಿ ಜಾತ್ರಾ ಮಹೋತ್ಸವದ ನಿಮಿತ್ತ ಪಟ್ಟಣದ ನೂತನ ವಾಲ್ಮೀಕಿ ಸಮುದಾಯ ಭವನದಲ್ಲಿ ಸೋಮವಾರ ಆಯೋಜಿಸಿದ್ದ ಪೂರ್ವಭಾವಿ ಸಭೆಯ ಸಾನಿಧ್ಯ ವಹಿಸಿ ಅವರು ಮಾತನಾಡಿದರು.

ರಾಜ್ಯದಲ್ಲಿ ಹಲವಾರು ವರ್ಷಗಳಿಂದ ಎಸ್ಸಿ ಎಸ್ಟಿ ನಕಲಿ ಜಾತಿ ಪ್ರಮಾಣ ಪತ್ರದ ಹಾವಳಿ ಹೆಚ್ಚಾಗಿದೆ. ಎಸ್ಟಿ ಮೀಸಲು ಕ್ಷೇತ್ರದಿಂದ ಚುನಾವಣೆಯಲ್ಲಿ ಗೆದ್ದಿರುವ 15 ಜನ ಶಾಸಕರು, ಇಬ್ಬರು ಸಂಸದರು, ರಾಜ್ಯ ಸರ್ಕಾರದಲ್ಲಿ ಮೂವರು ಪ್ರಭಾವಿ ಸಚಿವರು ಹಾಗೂ ವಿರೋಧಪಕ್ಷದಲ್ಲಿ ಪ್ರಭಾವಿ ನಾಯಕರಿದ್ದರೂ, ಈ ಬಗ್ಗೆ ಧ್ವನಿಯತ್ತದೆ ಇರುವುದು ಬೇಸರ ತರಿಸಿದೆ. ರಾಜ್ಯ ಸರ್ಕಾರ ಕೂಡಲೇ ಇದಕ್ಕೆ ಕಡಿವಾಣ ಹಾಕಬೇಕೆಂದು ಒತ್ತಾಯಿಸಿದರು.

ವಾಲ್ಮೀಕಿ ನಾಯಕ ಸಮುದಾಯ ರಾಜ್ಯದ 4ನೇ ಅತಿ ದೊಡ್ಡ ಸಮುದಾಯವಾಗಿದ್ದು, ಅಸಂಘಟಿತ ಸಮುದಾಯವನ್ನು ಧರ್ಮದ ತಳಹದಿಯ ಮೇಲೆ ಪುಣ್ಯಾನಂದಪುರಿ ಸ್ವಾಮೀಜಿ ಸಂಘಟನೆ ಮಾಡಿ ಒಂದುಗೂಡಿಸಲು ಶ್ರಮಿಸಿದ್ದಾರೆ. ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿಯನ್ನುಹೆಚ್ಚಳಮಾಡಬೇಕೆಂದು ಪಾದಯಾತ್ರೆ ಮತ್ತು ಧರಣಿ ಸತ್ಯಾಗ್ರಹ ಕುಳಿತಿದ್ದರಿಂದ ಹಿಂದಿನ ಸರ್ಕಾರ ಎಚ್ಚತ್ತು ನಮ್ಮ ಮನವಿಗೆ ಸ್ಪಂದಿಸಿ, ಮೀಸಲಾತಿ ಪ್ರಮಾಣ ಹೆಚ್ಚಳಕ್ಕೆ ಮುಂದಾಗಿ ಮಹತ್ವದ ನಿರ್ಧಾರವನ್ನು ತೆಗೆದುಕೊಂಡಿದ್ದರಿಂದ ರಾಜ್ಯದಲ್ಲಿ ಮೀಸಲಾತಿ ಪ್ರಮಾಣ ಹೆಚ್ಚಾಗಿದೆ ಎಂದು ಹೇಳಿದರು.

ಮಠದಲ್ಲಿ ನಡೆಯುವ ವಾಲ್ಮೀಕಿ ಜಾತ್ರಾ ಮಹೋತ್ಸವದಲ್ಲಿ ಪ್ರತಿ ವರ್ಷವೂ ಒಂದು ಅಜೆಂಡವನ್ನು ಇಟ್ಟುಕೊಂಡು ಬರಲಾಗಿದೆ. ಅದರಂತೆಯೇ, ಈ ಬಾರಿಯೂ ಒಂದು ಅಜೆಂಡವನ್ನು ಇಟ್ಟುಕೊಳ್ಳಲಾಗಿದೆ. ಈ ವರ್ಷ ವಾಲ್ಮೀಕಿ ಜಾತ್ರಾ ಸಮಿತಿ ಅಧ್ಯಕ್ಷರಾಗಿ ಕರ್ನಾಟಕ ಸರ್ಕಾರದ ಸಹಕಾರ ಸಚಿವರಾದ ಕೆ.ಎನ್. ರಾಜಣ್ಣ ಆಯ್ಕೆಯಾಗಿದ್ದಾರೆ. ಜಾತ್ರೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಮತ್ತು ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಕುಮಾರಸ್ವಾಮಿ ಸೇರಿದಂತೆ ಕೇಂದ್ರ ಸಚಿವರು, ರಾಜ್ಯ ಸರ್ಕಾರದ ಸಚಿವರು, ಶಾಸಕರು, ಸಂಸದರು, ಚಿಂತಕರು, ಸಾಹಿತಿಗಳು, ವಿವಿಧ ಸಂಘಟನೆಗಳ ಹೋರಾಟಗಾರರು, ರಾಜಕೀಯ ಮುಖಂಡರು ಹಾಗೂ ಸಮುದಾಯದ ಬಂಧುಗಳು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಮಾಹಿತಿ ನೀಡಿದರು.

ಈ ವೇಳೆ ಸಭೆಯಲ್ಲಿ ತಾಲೂಕು ನಾಯಕ ಸಮಾಜದ ಅಧ್ಯಕ್ಷ ರಂಗನಾಥ್, ಕಾರ್ಯದರ್ಶಿ ವೆಂಗಳಾಪುರ ರಂಗನಾಥ್, ಖಜಾಂಚಿ ಜಯಣ್ಣ, ನೌಕರರ ಸಂಘದ ಅಧ್ಯಕ್ಷ ಜಯಪ್ರಕಾಶ್, ಮುಖಂಡರಾದ ತುಂಬಿನಕೆರೆ ಬಸವರಾಜ್, ಗೌಡ್ರ ತಿಪ್ಪೇಸ್ವಾಮಿ, ನಾಗರಾಜ್ ಮತ್ತು ಶರತ್ ಸೇರಿದಂತೆ ಹಲವಾರು ಮುಖಂಡರಿದ್ದರು.

## ಫಾಸ್ಟ್ ನ್ಯೂಸ್

### ನೂತನವಾಗಿ ಪದಾಧಿಕಾರಿಗಳ ಆಯ್ಕೆ



» ಹಿರಿಯೂರು

ಕರ್ನಾಟಕ ಭೀಮ್ ಸೇನೆ ಸಂಘಟನೆಗೆ ರಾಜ್ಯಅಧ್ಯಕ್ಷರಾದ ಶಂಕರ್ ರಾಮಲಿಂಗಯ್ಯ ರವರ ಆದೇಶದ ಮೇರೆಗೆ ಮತ್ತು ರಾಜ್ಯ ಕಾರ್ಯದರ್ಶಿಗಳಾದ ವಿ.ಶಿವಕುಮಾರ್ ಮತ್ತು ಜಿಲ್ಲಾ ಅಧ್ಯಕ್ಷಕರಾದ ರಮೇಶ್, ಉಪಾಧ್ಯಕ್ಷರಾದ ಲಿಂಗರಾಜ್, ಸುರೇಶ್ ಕಳವಿಭಾಗಿ, ದುರ್ಗೇಶ್ ಘಾಟ್, ನರಸಿಂಹಮೂರ್ತಿ ಜೆಜಿಹಳ್ಳಿ, ರಮೇಶ್. ಪ್ರದೀಪ್ ಮಂಜುನಾಥ್ ಕೃಷ್ಣ ಮೂರ್ತಿ ಪ್ರಭಾಕರ್ ರವರ ಸಮ್ಮುಖದಲ್ಲಿ ನೂತನ ಪದಾಧಿಕಾರಿಗಳ ಸಮ್ಮುಖದಲ್ಲಿ ಆಯ್ಕೆ ಮಾಡಲಾಯಿತು. ಹಿರಿಯೂರು ತಾಲ್ಲೂಕು ನೂತನ ಅಧ್ಯಕ್ಷರಾಗಿ ವಿಜಯಕುಮಾರ್ ಪ್ರತ್ರೇಹಳ್ಳಿ. ಹೊಳಲ್ಕೆರೆ ತಾಲ್ಲೂಕು ಅಧ್ಯಕ್ಷರಾಗಿ ತಿಪ್ಪೇಶ್ (ಕಡೂರು). ಕಾರ್ಯಾಧ್ಯಕ್ಷರಾಗಿ ತಿಮ್ಮಯ್ಯ ಬಗ್ಗನಾಡು, ಜಿಲ್ಲಾ ಮಹಿಳಾ ಘಟಕದ ಅಧ್ಯಕ್ಷರಾಗಿ ಇಂದಿರಾ, ಜಿಲ್ಲಾ ಅಲ್ಪಸಂಖ್ಯಾತರ ಘಟಕದ ಅಧ್ಯಕ್ಷರಾಗಿ ಕೆ.ಬಿ.ದಾದಾಪೀರ್, ಯುವಘಟಕದ ಅಧ್ಯಕ್ಷರಾಗಿ ವೈ.ಮಹೇಶ್, ನಗರ ಘಟಕದ ಅಧ್ಯಕ್ಷರಾಗಿ ಡಿ.ಕೆ. ರಾಘು, ಯುವ ಘಟಕದ ಉಪಾಧ್ಯಕ್ಷರಾಗಿ, ಮಂಜುನಾಥ್ ಕೆ.ಆರ್.ಹಳ್ಳಿ, ಅಲ್ಪಸಂಖ್ಯಾತರ ಘಟಕದ ಅಧ್ಯಕ್ಷರಾಗಿ ಮಹಮ್ಮದ್ ಖಸೀಮ್, ಅಲ್ಪಸಂಖ್ಯಾತರ ಗೌರವ ಅಧ್ಯಕ್ಷರಾಗಿ ಲತಿಪ್ ಸಾಬ್ ಘಾಟ್, ಹಿರಿಯೂರು ಮಹಿಳಾ ಘಟಕದ ಅಧ್ಯಕ್ಷರಾಗಿ ಕೊಲ್ಲಮ್ಮ, ಚಳ್ಳಕೆರೆ ತಾಲ್ಲೂಕು ಮಹಿಳಾ ಅಧ್ಯಕ್ಷರಾಗಿ ಪಾರ್ವತಮ್ಮ. ಉಪಾಧ್ಯಕ್ಷರಾಗಿ ಕರಿಯಮ್ಮ ಘಾಟ್ ಇವರುಗಳನ್ನು ಆಯ್ಕೆ ಮಾಡಲಾಗಿದೆ.

### ವೃದ್ಧಾಶ್ರಮದ ನಿವಾಸಿಗಳಿಗೆ ಭೋಜನದ ವ್ಯವಸ್ಥೆ



» ಹಿರಿಯೂರು

ತಾಲ್ಲೂಕಿನ ಭೀಮನಬಂಡೆಯ ಶ್ರೀಶುಭೋದಯ ವೃದ್ಧಾಶ್ರಮದಲ್ಲಿ ಶ್ರೀಶಾರ್ವಣಿ ಜ್ಯೋತಿಷ್ಯಾಲಯದ ಶ್ರೀಯುತ ದೀಕ್ಷಿತ್ ರವರು ವೃದ್ಧಾಶ್ರಮದ ಎಲ್ಲಾ ಆಶ್ರಮವಾಸಿಗಳಿಗೆ ಬೆಳಗಿನ ತಿಂಡಿ, ಮಧ್ಯಾಹ್ನದ ಭೋಜನ ಹಾಗೂ ರಾತ್ರಿಯ ಊಟದ ವ್ಯವಸ್ಥೆ ಮಾಡಿದರು, ಹಾಗೆಯೇ ಆಶ್ರಮದಲ್ಲಿ ಪ್ರತಿಷ್ಠಾಪಿಸಿರುವ ಸದ್ಗುರು ಶ್ರೀಸಾಯಿಬಾಬಾರವರಿಗೆ ಆರತಿ, ಪೂಜೆ ನೆರವೇರಿಸಿದರು. ಹಾಗೆಯೇ ಆಶ್ರಮದಲ್ಲಿರುವ ಗೋವುಗಳಿಗೆ ಪೂಜೆ ಸಲ್ಲಿಸಿ, ಆಹಾರ ನೀಡಿ ಆಶ್ರಮದ ನಿವಾಸಿಗಳೊಂದಿಗೆ ಕೆಲಕಾಲ ಸಂತಸದಿಂದ ಕಾಲ ಕಳೆದರು.ಈ ಕುರಿತು ಮಾತನಾಡಿದ ಆಶ್ರಮದ ಮುಖ್ಯಸ್ಥರಾದ ತೇಜೋಮೂರ್ತಿಯವರು ಅತ್ಯಂತ ಹೃದಯಪೂರ್ವಕಸೇವಾಮನೋಭಾವದೊಂದಿಗೆ ನಮ್ಮಆಶ್ರಮಕ್ಕೆಆಗಮಿಸಿ ಆಶ್ರಮದವೃದ್ಧರೆಲ್ಲಾರಿಗೂ ಭೋಜನ ವ್ಯವಸ್ಥೆ ಮಾಡಿದ ಎಲ್ಲಾ ಸಹೃದಯರಿಗೂ ಆಶ್ರಮದ ಕಾರ್ಯಕಾರಿ ಸಮಿತಿ ವತಿಯಿಂದ ಅಭಿನಂದನೆ ಸಲ್ಲಿಸಿದರು.ಈ ಸಂದರ್ಭದಲ್ಲಿ ಶ್ರೀ ತೇರುಮಲ್ಲೇಶ್ವರ ಸ್ವಾಮಿಯ ಅರ್ಚಕರಾದ ಮಲ್ಲೇಶ್, ಸಿದ್ದೇಶ್, ನವೀನ್ ಸೇರಿದಂತೆ ಆಶ್ರಮದ ನಿವಾಸಿಗಳು ಉಪಸ್ಥಿತರಿದ್ದರು.

### ಕಿಸಾನ್ ಸಂಘದಿಂದ ಬೃಹತ್ ಪ್ರತಿಭಟನೆ

» ಶಿವಮೊಗ್ಗ

ರೈತರಿಗೆ ಹಾಲಿನ ದರ ಇಳಿಕೆ ಮಾಡಿ ಅನ್ಯಾಯ ಮಾಡಿರುವ ಶಿವಮೊಗ್ಗ, ಚಿತ್ರದುರ್ಗ, ದಾವಣಗೆರೆ ಹಾಲು ಉತ್ಪಾದಕರ ಒಕ್ಕೂಟವಾದ ಶಿಮುಲ್ ಒಂದು ಲೀಟರ್ ಹಾಲಿಗೆ ರೂ. 3.75 ಪೈಸೆಗಳನ್ನು ಕಡಿಮೆ ಮಾಡಿದ್ದು, ಇದು ನಿಜಕ್ಕೂ ಖಂಡನೀಯ ಎಂಬುದಾಗಿ ಭಾರತೀಯ ಕಿಸಾನ್ ಸಂಘದ ಗೌರವಾಧ್ಯಕ್ಷ ಕಸವನಹಳ್ಳಿ ರಮೇಶ್ ಹೇಳಿದರು.

ತಾಲ್ಲೂಕಿನ ಮಾಚೇನಹಳ್ಳಿ ಗ್ರಾಮದ ಶಿವಮೊಗ್ಗ ಹಾಲು ಒಕ್ಕೂಟ ಕೇಂದ್ರದ ಮುಂಭಾಗದಲ್ಲಿ ಕಿಸಾನ್ ಸಂಘದ ನೇತೃತ್ವದಲ್ಲಿ ಹಮ್ಮಿಕೊಳ್ಳಲಾಗಿದ್ದ ಪ್ರತಿಭಟನೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಹಾಲು ಒಕ್ಕೂಟ ಕೇಂದ್ರದ ಘನಘೋರ ಅನ್ಯಾಯವನ್ನು ಖಂಡಿಸಿ, ಭಾರತೀಯ ಕಿಸಾನ್ ಸಂಘದಿಂದ ಮೂರು ಜಿಲ್ಲೆಗಳ ಹಾಲು ಉತ್ಪಾದಕರು ಭಾರತೀಯ ಕಿಸಾನ್ ಸಂಘದ ನೇತೃತ್ವದಲ್ಲಿ ಪ್ರತಿಭಟನೆ ಮಾಡಲು ಶಿಮುಲ್ ಮುಂಭಾಗದಲ್ಲಿ ಹೈನುಗಾರಿಕೆ ಮುಖ್ಯ ಕಸುಬು ಮಾಡುವ ಹಾಲು ಉತ್ಪಾದಕ ರೈತರು ಮುಂದಾಗಿದ್ದಾರೆ ಎಂದರಲ್ಲದೆ, ನಮ್ಮ ರೈತರಿಗೆ ನ್ಯಾಯ ಸಿಗುವ ತನಕ ನಿರಂತರ ಹೋರಾಟ ಮಾಡಲಾಗುವುದು ಎಂದರಲ್ಲದೆ, ಶಿಮುಲ್ ಕಚೇರಿ ಮುಂಭಾಗ ಹೆಚ್ಚಿನ ಸಂಖ್ಯೆಯಲ್ಲಿ ರೈತರು ಆಗಮಿಸಿ ಹೋರಾಟಕ್ಕೆ ಬೆಂಬಲಿಸುವ ಮೂಲಕ ರೈತರ ಸಂಕಷ್ಟಕ್ಕೆ ಪರಿಹಾರ ಕಂಡುಕೊಳ್ಳಬೇಕು ಎಂಬುದಾಗಿ ಅವರು ರೈತರಿಗೆ ಕರೆನೀಡಿದರು. ಈ ಸಂದರ್ಭದಲ್ಲಿ ದೊಡ್ಡಘಟ್ಟ ಕುಮಾರ್, ಕಾತ್ರಿಕೇನ ಹಳ್ಳಿ ಮಂಜುನಾಥ್ ಉಪಸ್ಥಿತರಿದ್ದರು.

### ಸೇವಾ ವಂಚಿತ ವಲಸೆ ಕಾರ್ಮಿಕರೊಂದಿಗೆ ಸಭೆ ನಡೆಸಿದ ಟಿಹೆಚ್ಒ ಡಾ.ಬಿ.ವಿ.ಗಿರೀಶ್

# ಮಹಾರಾಷ್ಟ್ರ ವಲಸೆ ಕಾರ್ಮಿಕರ ಮಕ್ಕಳಿಗೆ ಲಸಿಕೆ, ಗರ್ಭಿಣಿ ಆರೈಕೆ ಸೇವೆ ಪಡೆಯಲು ಮನವೊಲಿಕೆ

» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕಿನ ಕಾಸವರಹಟ್ಟಿ ಪ್ರಾಥಮಿಕ ಆರೋಗ್ಯ ಕೇಂದ್ರ ವ್ಯಾಪ್ತಿಯ ಹಳೆಕಲ್ಲಹಳ್ಳಿ ಗೊಲ್ಲರಹಟ್ಟಿ ಗ್ರಾಮಕ್ಕೆ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ನೇತೃತ್ವದ ತಂಡ ಈಚೆಗೆ ಭೇಟಿ ಸೇವಾ ವಂಚಿತ ಮಹಾರಾಷ್ಟ್ರ ವಲಸೆ ಕಾರ್ಮಿಕರ ಮಕ್ಕಳಿಗೆ ಲಸಿಕೆ ಹಾಕಿಸುವಂತೆ, ಗರ್ಭಿಣಿ ಆರೈಕೆ ಸೇವೆ ಪಡೆಯುವಂತೆ ಮನವೊಲಿಸಲಾಯಿತು.

ತಾಲ್ಲೂಕು ಆರೋಗ್ಯಾಧಿಕಾರಿಗಳ ತಂಡ ಹಾಗೂ ಕಾಸವರಹಟ್ಟಿ ಪ್ರಾಥಮಿಕ ಆರೋಗ್ಯ ಕೇಂದ್ರದ ತಂಡ ಸೇವೆ ನೀಡಲು ದುಸ್ತರವಾದ ಪ್ರದೇಶದಲ್ಲಿ ವಲಸೆ ಕಾರ್ಮಿಕರು ವಾಸಿಸುತ್ತಿರುವುದನ್ನು ಗುರುತಿಸಿ ಸೇವಾ ವಂಚಿತ ವಲಸೆ ಕಾರ್ಮಿಕರೊಂದಿಗೆ ಸಭೆ ನಡೆಸಲಾಯಿತು.

ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಮಾತನಾಡಿ, ಗರ್ಭಿಣಿಯರ ಆರೈಕೆ, ಬಾಣಂತಿಯರ ಆರೈಕೆ, ಮಕ್ಕಳ ಆರೈಕೆ ಸರಿಯಾಗಿ ಮಾಡಲು ಕುಟುಂಬದ ಸರ್ವ ಸದಸ್ಯರು ಸಹಕಾರ ನೀಡಬೇಕು. ಗರ್ಭವಸ್ಥೆಯಲ್ಲಿ ಮಹಿಳೆಯ ಆರೈಕೆ ಸರಿಯಾಗಿ ಮಾಡಿದರೆ ತಾಯಿ ಮರಣ, ಶಿಶು ಮರಣ ತಡೆಗಟ್ಟಬಹುದು ಎಂದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಮಾತನಾಡಿ,



ಗರ್ಭಿಣಿಯರು ಪ್ರತಿ ತಿಂಗಳು 9ನೇ ತಾರೀಕಿನಂದು ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ನಡೆಯುವ ಪ್ರಧಾನ ಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನದಲ್ಲಿ ಪಾಲ್ಗೊಂಡು ಉಚಿತ ಪ್ರಯೋಗಾಲಯ ಪರೀಕ್ಷೆಗಳು, ರಕ್ತದೊತ್ತಡ, ಸಿಹಿ ಮೂತ್ರ ಇತರೆ ಪರೀಕ್ಷೆಗಳನ್ನ ಮಾಡಿಸಿ ವೈದ್ಯರು ನೀಡುವ ಸಲಹೆ ಸೂಚನೆಗಳನ್ನು ಪಾಲಿಸಬೇಕು. ಪೌಷ್ಟಿಕಾಂಶಯುಕ್ತ ಆಹಾರಗಳನ್ನು ಸೇವನೆ ಮಾಡಿ ಮನೆ ಹೆರಿಗೆ ಮಾಡಿಸದೆ ಆಸ್ಪತ್ರೆಯಲ್ಲಿ ಹೆರಿಗೆ ಮಾಡಿಸಿಕೊಳ್ಳಿ ಎಂದು ಸಲಹೆ ನೀಡಿದರು.

ನಿಮಗೆ ಮತ್ತು ನಿಮ್ಮ ಮಕ್ಕಳಿಗೆ ಕಾಲಕಾಲಕ್ಕೆ ಮಾರಣಾಂತಿಕ ರೋಗಗಳ ವಿರುದ್ಧ ಲಸಿಕೆಯನ್ನು ಪಡೆದುಕೊಳ್ಳಬೇಕು. ಕಬ್ಬಿನಾಂಶದ ಮತ್ತು ಕ್ಯಾಲ್ಸಿಯಂ ಮಾತ್ರೆಗಳನ್ನು ತಪ್ಪದೇ ಸೇವಿಸಿ, ರಕ್ತಹೀನತೆಗೆ ಅವಕಾಶ ನೀಡದೆ, ಸೊಪ್ಪು ತರಕಾರಿ, ನಾರು ಬೇರು ಖನಿಜ ಅಂಶಯುಕ್ತ, ಅನ್ನಾಂಗ ಯುಕ್ತ, ಪ್ರೋಟೀನ್ ಯುಕ್ತ, ಹಣ್ಣು ಹಾಲು ಮೊಟ್ಟೆ ಮೀನು ಬೇಳೆ ಕಾಳುಗಳನ್ನ ಸೇವಿಸಿ ಗರ್ಭವಸ್ಥೆಯಲ್ಲಿ ಮಹಿಳೆಯರ ಆರೈಕೆಗೆ ಕುಟುಂಬದ ಸದಸ್ಯರೆಲ್ಲರೂ ಒಗ್ಗೂಡಿ ಆರೈಕೆ ಮಾಡಿ ಎಂದರು. ಕಾಸವರಹಟ್ಟಿ ಪ್ರಾಥಮಿಕ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ.ಕಾವ್ಯ ಕಾರ್ಮಿಕರನ್ನು ಮನವಲಿಸುತ್ತಾ ಆರೋಗ್ಯ ಇಲಾಖೆ ಎಲ್ಲಾ ಸೇವಗಳು ನಿಮಗಾಗಿ ಉಚಿತವಾಗಿ ನೀಡುತ್ತೇವೆ. ನಿಮ್ಮ ಈ ಗುಂಪಿನಲ್ಲಿ ಚಿಕ್ಕ ವಯಸ್ಸಿನ ಗರ್ಭಿಣಿಯರಿದ್ದಾರೆ. ಲಸಿಕ ವಂಚಿತ ಸಣ್ಣ ಸಣ್ಣ ಮಕ್ಕಳಿದ್ದಾರೆ. ನಿಮ್ಮ ಸಮಸ್ಯೆಗಳನ್ನು ಹೇಳಿಕೊಳ್ಳಲು ಕನ್ನಡ ಭಾಷೆ ಬೇರೆ ಬರುವುದಿಲ್ಲ. ಆದಾಗಿಯೂ ಆರೋಗ್ಯ ಇಲಾಖೆ ನೀವು ಇರುವ ಸ್ಥಳದಲ್ಲಿಯೇ ಬಂದು ಸೇವೆ ಒದಗಿಸಲು ಸಿದ್ಧರಾಗಿದ್ದೇವೆ. ನಿಮ್ಮನ್ನು ಕೆಲಸಕ್ಕೆ ಕರೆತಂದ ಮೇಸ್ತ್ರಿ ಅವರಿಗೂ ಸಹ ತಿಳುವಳಿಕೆ ನೀಡಿದ್ದೇವೆ. ಮಕ್ಕಳ ಆರೈಕೆ, ಗರ್ಭಿಣಿ ಆರೈಕೆ ಸೇವೆಗಳನ್ನು ಪಡೆದುಕೊಳ್ಳಿ ಎಂದರು.

ಸ್ಥಳದಲ್ಲಿಯೇ ರಕ್ತ ಪರಿಶೀಲನೆ ಪರೀಕ್ಷೆ ನಡೆಸಿರಕ್ತಹೀನತೆತೊಲಗಿಸಲುಕಬ್ಬಿನಾಂಶದ ಮಾತ್ರೆಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ, ಸಮುದಾಯ ಆರೋಗ್ಯಾಧಿಕಾರಿ ಸುರೇಶ್, ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿ ಆಶಾ ಮತ್ತು ಸ್ಥಳೀಯ ಆಶಾ ಕಾರ್ಯಕರ್ತೆಯರು ಭಾಗವಹಿಸಿದ್ದರು.



**ಚಿತ್ರದುರ್ಗದಲ್ಲಿಂದು 5ನೇ ವಾರ್ಡಿನ ಸವಿತಾ ಕಾಲೋನಿಯಲ್ಲಿ ಅಯೋಧ್ಯೆಯಿಂದ ಪ್ರಭು ಶ್ರೀ ರಾಮನಿಗೆ ಪೂಜಿಸಿದ ಪವಿತ್ರ ಮಂತ್ರಾಕ್ಷತೆ ಹಾಗೂ ಶ್ರೀರಾಮ ಮಂದಿರದ ಉದ್ಘಾಟನೆಯ ಕರಪ್ರತಿ ಪತ್ರಿಕೆಯನ್ನು ಮನೆ ಮನೆಗೆ ತಲುಪಿಸಲಾಯಿತು . ಈ ಸಂದರ್ಭದಲ್ಲಿ ಬಿಜೆಪಿ ಯುವ ಮುಖಂಡರಾದ ಡಾ ಸಿದ್ದಾರ್ಥ್, ಚಿತ್ರದುರ್ಗ ಬಿಜೆಪಿ ಜಿಲ್ಲಾಧ್ಯಕ್ಷರಾದ ಶ್ರೀ ಎ. ಮುರುಳಿ, ನಗರಸಭಾ ಸದಸ್ಯರಾದ ಹರೀಶ್, ಜಿಲ್ಲಾ ವಕ್ತಾರರಾದ ನಾಗರಾಜ್ ಬೇದ್ರೆ, ಮಾಜಿ ನಗರಸಭಾ ಸದಸ್ಯರಾದ ಗಾನ ಲಿಂಗರಾಜು, ವಾರ್ಡಿನ ಪ್ರಮುಖರಾದ ರಾಘಣ್ಣ, ಶ್ಯಾಮ್, ಅನಿಲ್ ನಾಗ್, ಯಶವಂತ್ ಕಮಲೇಶ್ ಉಪಸ್ಥಿತರಿದ್ದರು..**

## ಫುಲೆ ತ್ಯಾಗ ಮತ್ತು ಶಿಕ್ಷಣಕ್ಕೆ ನೀಡಿದ ಕೊಡುಗೆ ಅವಿಸ್ಮರಣೀಯವಾಗಿದೆ



» ಹಿರಿಯೂರು

ಭಾರತ ದೇಶದ ಮೊದಲ ಶಿಕ್ಷಕಿಯೆಂದೇ ಹೆಸರಾದ ಶ್ರೀಮತಿ ಸಾವಿತ್ರಿಬಾಯಿ ಫುಲೆ ಅವರ ತ್ಯಾಗ ಮತ್ತು ಅವರು ಶಿಕ್ಷಣಕ್ಕೆ ನೀಡಿದ ಕೊಡುಗೆ ಅವಿಸ್ಮರಣೀಯವಾಗಿದ್ದು, ಅವರ ಆದರ್ಶಗಳನ್ನು ಇಂದಿನ ಮಹಿಳೆಯರು ಅಳವಡಿಸಿಕೊಳ್ಳಬೇಕು ಎಂಬುದಾಗಿ ಶ್ರೀಮತಿ ಲೋಕಮ್ಮ ಹೇಳಿದರು.ನಗರದಲ್ಲಿ ಸಾವಿತ್ರಿಬಾಯಿ ಫುಲೆ ಶಿಕ್ಷಕಿಯರ ಸಂಘದ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಮಾತೆ ಸಾವಿತ್ರಿಬಾಯಿ ಫುಲೆರವರ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಅವರು ಮಾತನಾಡಿದರು ಇದೇ ಸಂದರ್ಭದಲ್ಲಿ ಶ್ರೀಮತಿ ಅನುಸೂಯ, ಶ್ರೀಮತಿ ಗಂಗಮ್ಮ, ಶ್ರೀಮತಿ ನಿರ್ಮಲ ಇವರುಗಳನ್ನು ಸನ್ಮಾನಿಸಿದರು.

# ಸಮಾಜಕ್ಕೆ ಕೊಡುಗೆ ನೀಡಬಲ್ಲ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಿಸಿ: ಬಿಇಓ ಸುರೇಶ್

» ಚಳ್ಳಕೆರೆ

ಶಾಲಾ ಹಂತದಲ್ಲೇ ವಿದ್ಯಾರ್ಥಿಗಳಿಗೆ ಗುಣಾತ್ಮಕ ಶಿಕ್ಷಣ ನೀಡಿ, ಅವರ ಭವಿಷ್ಯದ ಸ್ವಾವಲಂಭಿ ಬದುಕನ್ನು ಅಚ್ಚುಕಟ್ಟಾಗಿ ನಿರ್ವಹಿಸುವ ಶಕ್ತಿ ಕೇವಲ ಶಿಕ್ಷಕನಿಗೆ ಮಾತ್ರ ಇದೆ. ಶಿಕ್ಷಕನು ಮಾಡುವ ಉತ್ತಮ ಕಾರ್ಯದಿಂದ ಸಮಾಜದಲ್ಲಿ ಸುಖ,ಶಾಂತಿ ನೆಲೆಸುತ್ತದೆ. ವಿದ್ಯಾರ್ಥಿಗಳ ಅಭ್ಯುದಯವನ್ನು ನಿಸ್ವಾರ್ಥದಿಂದ ಬಯಸುವವನೇ ಶಿಕ್ಷಕ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದರು. ಅವರು, ಮಂಗಳವಾರ ತಳಕು ಹೋಬಳಿಯ ಕೋಡಿಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶಾಲೆಯ ಹಳೇವಿದ್ಯಾರ್ಥಿಗಳ ಸ್ನೇಹಮಿಲನ ಹಾಗೂ



ಗುರುವಂದನಾ ಕಾರ್ಯಕ್ರಮವನ್ನು ಗಿಡಕ್ಕೆ ನೀರು ಎರೆಯುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಇಂದು ಗುರುವಂದನೆಯನ್ನು ಸ್ವೀಕರಿಸುತ್ತಿರುವ ಹತ್ತಾರು ಶಿಕ್ಷಕರಿಗೆ ಬದುಕಿನ ಸಾರ್ಥಕತೆಯ ಬಗ್ಗೆ ಹೆಚ್ಚು ತಿಳಿಯುತ್ತದೆ. ಇಂತಹ ಸನ್ನಿವೇಶಗಳನ್ನು ಗುರುವಂದನಾ ಕಾರ್ಯಕ್ರಮದಲ್ಲಿ ಮಾತ್ರ ಕಾಣಲು ಸಾಧ್ಯ. ಗುರುವಿನ ಸೇವೆಯನ್ನು ನಿತ್ಯ ಸ್ಮರಿಸುವ ಪರಿಪಾಠವನ್ನು ವಿದ್ಯಾರ್ಥಿಗಳು ಬೆಳೆಸಿಕೊಳ್ಳಬೇಕು ಎಂದರು.

ಮುಖ್ಯ ಅತಿಥಿಯಾಗಿ ಆಗಮಿಸಿ ಮಾತನಾಡಿದ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಆರ್.ಮಾರುತೇಶ್, ಗುರು ಮತ್ತು ವಿದ್ಯಾರ್ಥಿಯ ನಡುವೆ ಇರುವ ಗಾಡವಾದ ಅಭಿಮಾನ, ಸಂಬಂಧ ಮತ್ತು ವಿಶಾಲವಾದ ದೃಷ್ಠಿಯನ್ನು ವರ್ಣಿಸಲು ಸಾಧ್ಯವಿಲ್ಲ. ಈ ಹಿಂದೆ ತಮಗೆ ಶಿಕ್ಷಣ ನೀಡಿದ ಗುರುವಿಗೆ ಎಲ್ಲವನ್ನೂ ಸಮರ್ಪಿಸುವ ಶಿಷ್ಯವೃಂದವನ್ನು ನಾವು ಕಾಣಬಹುದಿತ್ತು. ಆದರೆ, ಇಂದು ಸ್ವಲ್ಪ ಬದಲಾವಣೆಯಾದರೂ ಶಿಕ್ಷಣ ನೀಡಿದ ಗುರುವನ್ನು ಯಾವ ವಿದ್ಯಾರ್ಥಿಗಳು ಮರೆಯಬಾರದು ಎಂದರು.

ಕಾರ್ಯಕ್ರಮದಲ್ಲಿ ಗ್ರಾಮ ಮುಖಂಡ ಎಸ್.ಪಾಲಯ್ಯ, ಬೋರಪ್ಪ, ವೈದ್ಯ ಮುನಿಸ್ವಾಮಿರೆಡ್ಡಿ, ಶಿಕ್ಷಣ ಸಂಯೋಜಕ ಮಾರುತಿಭಂಡಾರಿ, ಎಸ್‌ಡಿಎಂಸಿ ಸದಸ್ಯ ಶ್ರೀಕಾಂತ್, ತಿಪ್ಪೇಸ್ವಾಮಿ, ವಿ.ಟಿ.ವಿಜಯ್‌ಕುಮಾರ್, ಡಿ.ವಿನಯ್‌ಕುಮಾರ್,ಬಿ.ಎಂ.ನಾಗರಾಜು, ತಿಪ್ಪೇಸ್ವಾಮಿ,ಎಂ.ಬಸವರಾಜು,ಬಸವರೆಡ್ಡಿ, ಪ್ರಸಾದ್, ನಾಗರಾಜು, ಶಿವರೆಡ್ಡಿ, ಮುಖ್ಯ ಶಿಕ್ಷಕ ಜಗನ್ನಾಥ, ಶಿಕ್ಷಕರಾದ ಬಸವರಾಜು, ರತ್ನಮ್ಮ, ಸುಶೀಲಮ್ಮ, ಆಶಾ, ಸುಪ್ರಿಯಾ, ಶಿವಮೂರ್ತಿ ಭಾಗವಹಿಸಿದ್ದರು.

## ಪ್ರಮುಖ ಸುದ್ದಿ

# ಕೇಂದ್ರ ಭದ್ರಾ ಯೋಜನೆಗೆ 5300 ಕೋಟಿ ಬಿಡುಗಡೆ

» ನಾಯಕನಹಟ್ಟಿ

ನಮ್ಮ ರಾಜ್ಯ ಬರಪೀಡಿತ ಪ್ರದೇಶವೆಂದು ಕೇಂದ್ರ ಸರ್ಕಾರ ಭದ್ರಮೇಲ್ದಂಡೆ ಯೋಜನೆಗೆ 5 ಸಾವಿರದ 300 ಕೋಟಿ ರೂಪಾಯಿಗಳನ್ನು ಹಣ ಬಿಡುಗಡೆ ಮಾಡಿದ್ದು ನಮ್ಮ ಕೇಂದ್ರ ಸರ್ಕಾರ ಎಂದು ಕೇಂದ್ರ ಸಚಿವ ಎ.ನಾರಾಯಣಸ್ವಾಮಿ ಹೆಮ್ಮೆಯಿಂದ ಹೇಳಿದರು.

ನಾಯಕನಹಟ್ಟಿ ಸಮೀಪದ ಗೌಡಗೆರೆ ಗ್ರಾಮದಲ್ಲಿ ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್, ಚಿತ್ರದುರ್ಗ ಕೆನರಾ ಬ್ಯಾಂಕ್ ಜೋಗಿಹಟ್ಟಿ ಇವರ ಸಹಯೋಗದಲ್ಲಿ ಅಭಿವೃದ್ಧಿ ಹೊಂದಿದ ಭಾರತ ಸಂಕಲ್ಪ ಯಾತ್ರೆ ಕಾರ್ಯಕ್ರಮವನ್ನು ಜ್ಯೋತಿ ಬೆಳಗುವುದರ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು ಕೋವಿಡ್ ಸಂಕಷ್ಟ ಕಾಲದಲ್ಲಿ ಪ್ರಧಾನಿ ನರೇಂದ್ರ ಮೋದಿಯವರು ದೇಶದ ಜನತೆಗೆ ಉಚಿತ ಲಸಿಕೆಯನ್ನು ನೀಡಿದರು. ದೇಶದ ಬಡ ಜನರು, ಸಾಮಾನ್ಯ ಜನರು, ಅನೇಕ



ವರ್ಗದ ಜನರಿಗೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ಪ್ರಧಾನಿ ಮೋದಿಯವರು ಅನೇಕ ಯೋಜನೆಗಳು ಜಾರಿ ಮಾಡಿದ್ದಾರೆ. ಕೃಷಿ ಸಮ್ಮಾನ್ ಯೋಜನೆ, ಕಿಸಾನ್ ಕ್ರೆಡಿಟ್ ಕಾರ್ಡ್, ಉಜ್ವಲ ಯೋಜನೆ, ಆಯುಷ್‌ಮಾನ್ ಕಾರ್ಡ್ ಇನ್ನು ಹಲವಾರು ಯೋಜನೆಗಳನ್ನು ಜಾರಿಗೆ ತಂದಿದ್ದಾರೆ. ಕೇಂದ್ರ ಸರ್ಕಾರದ ಸಮಾಜದ ಕಟ್ಟಕಡೆ ವ್ಯಕ್ತಿಗೆ ತಲುಪುತ್ತಿದೆ ಎಂದರು.

ಈ ಸಂದರ್ಭದಲ್ಲಿ ಉಪಸ್ಥಿತರಾದ ತಳಕು ಮತ್ತುನಾಯಕನಹಟ್ಟಿಮಂಡಲಅಧ್ಯಕ್ಷರಾದ ಈ.ರಾಮರೆಡ್ಡಿ, ಮೊಳಕಾಲ್ಮೂರು ಮಂಡಲ ಅಧ್ಯಕ್ಷ ಡಾ||ಮಂಜುನಾಥ, ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯ ಓ.ಮಂಜುನಾಥ, ಮಾಜಿ ತಾಲ್ಲೂಕು ಪಂಚಾಯಿತಿ ಸದಸ್ಯರು ಎನ್.ದೇವರಹಳ್ಳಿ ಹಾಗೂ ಮಾಜಿ ಗ್ರಾ.ಪಂ ಸದಸ್ಯರಾದ ಕೆ.ಎಸ್.ದಿವಾಕರ್‌ರೆಡ್ಡಿ, ಕೆ.ಪಿ.ತಾರಕೇಶ್,ತರುಣ್(ತುರುವನೂರು), ಡಿ.ಜಿ.ಗೋವಿಂದಪ್ಪ, ಗೌಡಗೆರೆ ಗ್ರಾ.ಪಂ ಅಧ್ಯಕ್ಷರಾದ ರಾಧಮ್ಮ ಬೋರಯ್ಯ, ಸದಸ್ಯರುಗಳು, ಜಿಲ್ಲಾ ರೈತಮೋರ್ಚಾ ಅಧ್ಯಕ್ಷ ಬಾಲರಾಜ್, ನಾರಾಯಣಸ್ವಾಮಿ ಆಪ್ತ ಸಹಾಯಕ ಜಿ.ಹೆಚ್.ಮೋಹನ್ ಕುಮಾರ್, ಗ್ರಾ.ಪಂ ಸದಸ್ಯರಾದ ಜಿ.ಓ.ಓಬಳೇಶ್, ಎಂ.ಹೆಚ್.ಲಕ್ಷ್ಮಣ, ಲೀಡ್ ಬ್ಯಾಂಕ್ ಮ್ಯಾನೇಜರ್ ತಿಪ್ಪೇಸ್ವಾಮಿ, ನಬಾರ್ಡ್ ಮ್ಯಾನೇಜರ್ ಕವಿತ, ನಾಯಕನಹಟ್ಟಿ ಕೆನರಾ ಬ್ಯಾಂಕ್ ಮ್ಯಾನೇಜರ್ ರಾಮ್‌ಮೋಹನ್, ಜೋಗಿಹಟ್ಟಿ ಕೆನರಾ ಬ್ಯಾಂಕ್ ಮ್ಯಾನೇಜರ್ ಗೌರಿ, ಪಿಎಸ್‌ಐ–2 ಶಿವಕುಮಾರ್, ಸಮುದಾಯ ಆರೋಗ್ಯ ಕೇಂದ್ರದ ಸಿಬ್ಬಂದಿಗಳು, ಆಶಾ ಕಾರ್ಯಕರ್ತರು ಇನ್ನೂ ಇತರರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಶಿಕ್ಷಕರು ಮಕ್ಕಳ ಕಡೆ ಹೆಚ್ಚುಗಮನಹರಿಸಿ: ಬಿಇಓ



» **ಹಿರಿಯೂರು**

ಸಾಮಾನ್ಯ ಬುದ್ದಿಮಟ್ಟ ಹೊಂದಿರುವ ಮಕ್ಕಳಿಗೆ ಶಾಲೆಗೆ ಹೋಗಲು ಭಯ ಕಾಡುತ್ತದೆ, ಅಂತಹ ಮಕ್ಕಳ ಕಡೆ ಶಿಕ್ಷಕರು ಹೆಚ್ಚು ಗಮನ ಹರಿಸಿ ಶಿಕ್ಷೆ ಎನಿಸದ ರೀತಿಯಲ್ಲಿ ಬೋಧನಾವಿಧಾನ ಅಳವಡಿಸಿಕೊಳ್ಳಬೇಕು ಎಂಬುದಾಗಿ ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಎಂ.ತಿಪ್ಪೇಸ್ವಾಮಿ ಸಲಹೆ ನೀಡಿದರು.ನಗರ ಬೈಪಾಸ್ ರಸ್ತೆಯ ಆಲೂರು ತಿರುವಿನಲ್ಲಿರುವ ಬಸವರಾಜ್ ಆಂಗ್ಲ ಮಾಧ್ಯಮ ಪ್ರೌಢಶಾಲೆಯಲ್ಲಿ ಹಮ್ಮಿಕೊಳ್ಳಲಾಗಿದ್ದ ಶಾಲಾ ವಾಷ್ರಿಕೋತ್ಸವ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುವುದು ಸರ್ಕಾರದ ಮುಖ್ಯ ಉದ್ದೇಶ, ಪೋಷಕರ ಬೇಡಿಕೆಗಳಿಗೆ ತಕ್ಕಂತೆ ಗುಣಮಟ್ಟದ ಶಿಕ್ಷಣ ನೀಡುವಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳು ಯಶಸ್ವಿಯಾಗಿವೆ, ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಇಂತಹ ಸಹಪಠ್ಯ ಚಟುವಟಿಕೆಗಳು ಪೂರಕವಾಗಿವೆ ಎಂಬುದಾಗಿ ಅವರು ಹೇಳಿದರು. ಇದೇ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷೆ ಮಂಜುಳಾ ಬಸವರಾಜ್ ಮಾತನಾಡಿದರು. ಈ ಕಾರ್ಯಕ್ರಮದಲ್ಲಿ ಅಗ್ನಿಶಾಮಕ ಠಾಣಾಧಿಕಾರಿ ಜಿ.ಸುಬಾನ್ ಸಾಬ್, ಸಂಸ್ಥೆಯ ಕಾರ್ಯದರ್ಶಿ ಎಸ್.ಬಿ.ಸಚಿನ್ ಗೌಡ, ಪ್ರಾಂಶುಪಾಲರಾದ ರಮಿತಾವಿಜಯ್, ಟ್ರಸ್ಟಿಗಳಾದ ಎನ್.ಎಸ್. ಜ್ಯೋತಿ, ಶ್ರೀರಂಗಪ್ಪ, ಮುನಿಸ್ವಾಮಿ, ಸಂದೀಪ್ ಯಾದವ್ ಉಪಸ್ಥಿತರಿದ್ದರು. ಸಭಾ ಕಾರ್ಯಕ್ರಮದ ನಂತರ ವಿದ್ಯಾರ್ಥಿಗಳು ದಶಾವತಾರ ರೂಪಕ ಒಳಗೊಂಡಂತೆ ವಿವಿಧ ಬಗೆಯ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಿಕೊಟ್ಟರು.

### ಖೋಖೋ ಪಂದ್ಯಾವಳಿ : ವಿವಿಧ ಶಾಲೆಗಳು ವಿಜಯ



» **ಹಿರಿಯೂರು**

ನ್ಯೂಡೈಮಂಡ್ ಕ್ರೀಡಾ ಮತ್ತು ಸಾಂಸ್ಕೃತಿಕ ಸಂಘದ 38ನೇ ವಾರ್ಷಿಕೋತ್ಸವ ಅಂಗವಾಗಿ ಇವರ ಆಶ್ರಯದಲ್ಲಿ ನಡೆಸಲಾದ ಪ್ರೌಢಶಾಲೆ ಮತ್ತು ಪ್ರಾಥಮಿಕ ಶಾಲೆಗಳ ಖೋಖೋ ಪಂದ್ಯಾವಳಿಯಲ್ಲಿ ವಿವಿಧ ಶಾಲೆಗಳು ವಿಜಯ ಸಾಧಿಸಿದ್ದು, ಈ ವಿಜೇತರಿಗೆ ಜನವರಿ 14 ರ ಸಂಕ್ರಾಂತಿ ಹಬ್ಬದಂದು ಸಂಜೆ ಬಹುಮಾನ ವಿತರಿಸಲಾಗುತ್ತದೆ ಎಂಬುದಾಗಿ ನ್ಯೂಡೈಮಂಡ್ ಕ್ರೀಡಾ ಮತ್ತು ಸಾಂಸ್ಕೃತಿಕ ಸಂಘದ ಕಾರ್ಯದರ್ಶಿ ಟಿ.ಬಾಲಾಜಿ ತಿಳಿಸಿದ್ದಾರೆ.ಈ ಪ್ರೌಢಶಾಲೆಗಳ ಬಾಲಕರ ವಿಭಾಗದ ಖೋಖೋ ಪಂದ್ಯಾವಳಿಯಲ್ಲಿ ಯಜ್ಞವಲ್ಕ ಪ್ರೌಢಶಾಲೆ ಪ್ರಥಮ ಸ್ಥಾನ ದೇವರಕೊಟ್ಟ ಪ್ರೌಢಶಾಲೆ, ದ್ವಿತೀಯ ಸ್ಥಾನ ಗಳಿಸಿದ್ದು, ಖೋಖೋ ಪ್ರಾಥಮಿಕ ಬಾಲಕರ ವಿಭಾಗದಲ್ಲಿ ಪ್ರಥಮ ಸ್ಥಾನ ಹರಿಶ್ಚಂದ್ರ ಘಾಟ್ ಹಿರಿಯ ಪ್ರಾಥಮಿಕ ಶಾಲೆ. ದ್ವಿತೀಯ ಸ್ಥಾನವನ್ನು ಯಾಜ್ಞವಲ್ಕ್ಯಪ್ರಾಥಮಿಕ ಶಾಲೆ ಪಡೆದಿವೆ.ಖೋಖೋ ಪ್ರಾಥಮಿಕ ಬಾಲಕಿಯರ ವಿಭಾಗದಲ್ಲಿ ಪ್ರಥಮ ಸ್ಥಾನ ಹರಿಶ್ಚಂದ್ರ ಘಾಟ್ ಪ್ರಾಥಮಿಕ ಶಾಲೆ, ದ್ವಿತೀಯ ಸ್ಥಾನ ಯಾಜ್ಞವಲ್ಕ್ಯ ಹಿರಿಯ ಪ್ರಾಥಮಿಕ ಶಾಲೆ ಪಡೆದು ಕೊಂಡಿರುತ್ತದೆ ಎಂಬುದಾಗಿ ನ್ಯೂಡೈಮಂಡ್ ಕ್ರೀಡಾ ಮತ್ತು ಸಾಂಸ್ಕೃತಿಕ ಸಂಘದ ಕಾರ್ಯದರ್ಶಿ ಟಿ.ಬಾಲಾಜಿ ತಿಳಿಸಿದ್ದಾರೆ.

### ದತ್ತಮಾಲಾ ಅಭಿಯಾನ ಕಾರ್ಯಕ್ರಮಕ್ಕೆ ಚಾಲನೆ



» **ಹಿರಿಯೂರು**

ನಗರದ ಲಕ್ಷ್ಮಮ್ಮ ಬಡಾವಣೆಯಲ್ಲಿರುವ ಶ್ರೀ ಲಕ್ಷ್ಮಿ ವೆಂಕಟೇಶ್ವರ ದೇವಸ್ಥಾನದಲ್ಲಿ ವಿಶ್ವ ಹಿಂದೂ ಪರಿಷತ್ ಹಾಗೂ ಭಜರಂಗದಳದ ಕಾರ್ಯಕರ್ತರು ದತ್ತಮಾಲಾ ಅಭಿಯಾನದ ಅಂಗವಾಗಿ ದೇವರಿಗೆ ವಿಶೇಷ ಪೂಜೆ ಸಲ್ಲಿಸಿ, ದತ್ತಮಾಲಾ ಅಭಿಯಾನಕ್ಕೆ ಚಾಲನೆ ನೀಡಲಾಯಿತು ಎಂಬುದಾಗಿ ವಿಶ್ವ ಹಿಂದೂ ಪರಿಷತ್ ಜಿಲ್ಲಾ ಸಹ ಕಾರ್ಯದರ್ಶಿ ಮಸ್ಕಲ್ ಶ್ರೀನಿವಾಸ್ ತಿಳಿಸಿದ್ದಾರೆ.

**18 ನೇ ಶತಮಾನ ಕಾಲವು ಕರ್ನಾಟಕ ಸಂಗೀತದ ಇತಿಹಾಸದಲ್ಲಿ ಸುವರ್ಣಯುಗವೆಂದು ದಾಖಲಾಗಿದೆ**

# ಹೊಸದುರ್ಗದಲ್ಲಿ ಸಂಕ್ರಾಂತಿ ಸಾಂಸ್ಕೃತಿಕ ಸಂಭ್ರಮ

» **ಹೊಸದುರ್ಗ**

ಆನ್‌ಲೈನ್ ಮೂಲಕವೂ ಈಗ ಸಂಗೀತ ಪಾಠ ಮಾಡುವ ಮಟ್ಟಿಗೆ ಸಂಗೀತ ಬೆಳೆದಿದೆ, ಈ ರೀತಿ ಭಾರತೀಯ ಸಂಗೀತದಲ್ಲಿ ಹೊಸ ಹೊಸ ಪ್ರಯೋಗಗಳು ನಡೆಯುತ್ತಲೇ ಇವೆ 18 ನೇ ಶತಮಾನ ಕಾಲವು ಕರ್ನಾಟಕ ಸಂಗೀತದ ಇತಿಹಾಸದಲ್ಲಿ ಸುವರ್ಣಯುಗವೆಂದು ದಾಖಲಾಗಿದೆ ಎಂದು ಶಿವಮೊಗ್ಗ ಕೃಷಿ ವಿಶ್ವವಿದ್ಯಾಲಯದ ಮಾಜಿ ಸಿಂಡಿಕೇಟ್ ಸದಸ್ಯ ಡಾ:ಎಂ.ಹೆಚ್.ಕೃಷ್ಣಮೂರ್ತಿ ಹೇಳಿದರು.

ಪಟ್ಟಣದ ಅಶೋಕ ರಂಗಮಂದಿರದಲ್ಲಿ ಗಾಯಕರಾದ ಎಸ್.ಪಿ.ವಿಜಯಕುಮಾರ್ ಹಾಗೂ ಶ್ರೀಮತಿ ಸುಮಾರಂಗನಾಥ್ ಅವರ ನೇತೃತ್ವದಲ್ಲಿ, ಆಯೋಜಿಸಲಾಗಿದ್ದ ಸಂಕ್ರಾಂತಿ ಸಾಂಸ್ಕೃತಿಕ ಸಂಭ್ರಮ ಕಾರ್ಯಕ್ರಮವನ್ನ ದೀಪ ಬೆಳಗಿಸುವುದರ ಮೂಲಕ ಉದ್ಘಾಟಿಸಿ ಮಾತನಾಡಿದರು.

ವೈಜ್ಞಾನಿಕತೆಯ ಕೊಡುಗೆಯಿಂದ ಭಾರತೀಯ ಸಂಗೀತದ ವಿಕಾಸ ಬಹು ವೇಗವಾಗಿ ಆಗುತ್ತಿದೆ, ಈಗಿನ ವೈಜ್ಞಾನಿಕ



ಯುಗದಲ್ಲಿ ಸಂಗೀತದಲ್ಲಿ ಮಹಾಪಲ್ಲಟವೇ ಆಗಿದೆ ಎಂದರು.

ಶ್ರೀ ವೀರಶೈವ ಮಹಿಳಾ ಬ್ಯಾಂಕ್ ಅಧ್ಯಕ್ಷೆ ಶ್ರೀಮತಿ ಅನಿತಾರಾಜೇಶ್ ಮಾತನಾಡಿ ಪ್ರತಿಯೊಬ್ಬರೂ ಸಹಾ ಸಂಗೀತವನ್ನ ಆಸ್ವಾಧಿಸುವ ಗುಣವನ್ನ ಬೆಳಸಿಕೊಳ್ಳಬೇಕು ಸಂಗೀತ ಕೇಳುವುದರಿಂದ ಮನಸ್ಸಿಗೆ ಸಾಕಷ್ಟು ನೆಮ್ಮದಿ ಸಿಗುತ್ತದೆ ಎಂದು ಹೇಳಿದ ಅವರು ಯಾವುದೇ ಕ್ಷೇತ್ರವಾಗಲಿ ಆ ಕ್ಷೇತ್ರಕ್ಕೆ ಹೋದ ಮೇಲೆ ಸಾಧನೆ ಮಾಡಿ ತೋರಿಸಬೇಕು ಎಂದು ಅಭಿಪ್ರಾಯಿಸಿದರು.

ಸನ್ಮಾನಿತರಾಗಿ ಆಗಮಿಸಿದ್ದ ಪತ್ರಕರ್ತ ಹಾಗು ಸಾಹಿತಿ ನಾಗತಿಹಳ್ಳಿಮಂಜುನಾಥ್ ಮಾತನಾಡಿ ಆಧುನಿಕ ಹಾಗೂ ತಂತ್ರಗಾರಿಕೆ ಜಗತ್ತಿನಲ್ಲಿ ನಶಿಸಿ ಹೋಗುತ್ತಿರುವ ಸಾಕಷ್ಟು ಕಲೆಗಳನ್ನು ಇಂದಿನ ಯುವ ಪೀಳಿಗೆ ಉಳಿಸಿ ಬೆಳಸಿಕೊಂಡು ಹೋಗುವ ನಿಟ್ಟಿನಲ್ಲಿ ಕೆಲಸ ಮಾಡಬೇಕು ಸಾಹಿತ್ಯ ಮತ್ತು ಸಂಗೀತ ಕಲೆಯನ್ನು ಉಳಿಸಿ ಬೆಳಸಬೇಕು ಎಂದರು.

ಸಂಗೀತ ಗಾಯನ ಹಾಗೂ ಸಾಂಸ್ಕೃತಿಕ ಕಲಾ ಸಂಸ್ಥೆಯ ಸಂಸ್ಥಾಪಕರು ಹಾಗು ಅಧ್ಯಕ್ಷರಾದ ಎಸ್.ಪಿ.ವಿಜಯಕುಮಾರ್ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಗಾಯಕ ಷಣ್ಮುಕಪ್ಪ,ಮಹಿಳಾ ಉದ್ಯಮಿ ಶ್ರೀಮತಿರೂಪವೀರೇಶ್, ಡಾ:ಕೋಮಲಸ್ವಾಮಿ, ಶ್ರೀಮತಿ ಸುಮಾರಂಗನಾಥ್, ಗಾಯಕಬಸ 'ವರಾಜ್,ವಸಂತಕುಮಾರ್, ರಂಗಭೂಮಿ ಕಲಾವಿದ ಪ್ರಸನ್ನ, ಮಹಿಳಾ ಸಾಹಿತಿ ಶ್ರೀಮತಿ ಹೆಚ್.ಸುಂದರಮ್ಮ, ಸಾಯಿ ಮಕ್ಕಳ ಪ್ರಪಂಚದ ಮಾಲಿಕ ನವೀನ್,ಭರತ್, ತ್ರಿಗುಣ ಹೋಟಲ್ ಮಾಲಿಕ ಮಂಜುನಾಥ್, ಸಾಹಿತಿ ಹಾಗೂ ಪತ್ರಕರ್ತ ಜೆ.ಜಿ.ನರಸಿಂಹಮೂರ್ತಿ, ಶ್ರೀವ ೨ತಿಕವಿತವಿಜಯಕುಮಾರ್,ಮಾರುತಿಗಣ ಪತಿರೇವಣಕರ್ ಉಪಸ್ಥಿತರಿದ್ದರು.

# ಜನ ಮಂಗಳ ಕಾರ್ಯಕ್ರಮದಲ್ಲಿ 7 ಜನರಿಗೆ ವಾಟರ್‌ಬೆಡ್ ವಿಲ್‌ಚೇರ್‌ಗಳ ವಿತರಣೆ

» **ಹೊಸದುರ್ಗ**

ಪಟ್ಟಣದ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಕೆಲ್ಲೋಡು ವಲಯದ ವಿಭಾಗ ಕಾರ್ಯಕ್ಷೇತ್ರದಿಂದ ತಾಲೂಕಿನ ಗೋರವಿನಕಲ್ಲು ಗ್ರಾಮದಲ್ಲಿ ಮಂಗಳವಾರ ಯೋಜನೆಯ ಜನ ಮಂಗಳ ಕಾರ್ಯಕ್ರಮದಲ್ಲಿ ಗ್ರಾಮದ ಏಳು ಜನರಿಗೆ ವಾಟರ್ ಬೆಡ್ ವೀಲ್ ಚೇರ್.ಗಳನ್ನು ವಿತರಣೆ ಮಾಡಲಾಯಿತು.



ನಂತರ ನಡೆದ ಸರಳ ಸಮಾರಂಭದಲ್ಲಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಸಾಹಿತಿ ನಾಗತಿಹಳ್ಳಿಮಂಜುನಾಥ್ ಶ್ರೀ ಕೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವತಿಯಿಂದ ರಾಜ್ಯದ ಎಲ್ಲಾ ಕಡೆಗಳಲ್ಲಿ ಸಮಾಜಮುಖಿಯಾದ ಕೆಲಸಗಳು ಡಾ:ವೀರೇಂದ್ರಹಗ್ಗಡೆಯವರ ಮಾರ್ಗದರ್ಶನದಲ್ಲಿ ನಡೆಯುತ್ತಿವೆ. ಇಂತಹ ಸಮಾಜ ಮುಖಿಯಾದ ಕೆಲಸಗಳು ನಡೆಯುತ್ತಿರುವುದರಿಂದ ಸಮಾಜದಲ್ಲಿ ಇರುವ ಅಶಕ್ತರು, ನಿಸ್ಸಾಹಕರು. ಬಡವರು, ದೀನ–ದಲಿತರು ದುರ್ಬಲರು ಇವರುಗಳಿಗೆ ನಾನ ವಿಧಗಳಲ್ಲಿ ಗ್ರಾಮಾಭಿವೃದ್ಧಿ ಯೋಜನೆಯ ವತಿಯಿಂದ ಸಾಕಷ್ಟು ಪ್ರಯೋಜಗಳು ಆಗುತ್ತಿವೆ, ಪೂಜ್ಯ ಹೆಗ್ಗಡೆಯವರ ಲೋಕಕಲ್ಯಾಣದ ಚಿಂತನೆಗಳು ಬಹುದೊಡ್ಡ ಚಿಂತನೆಗಳಾಗಿವೆ, ದುರ್ಬಲ ಮಹಿಳೆಯರನ್ನ ಆರ್ಥಿಕವಾಗಿ ಸದೃಢಗೊಳಿಸುವಲ್ಲಿ, ಪಾನಮತ್ತರನ್ನ ಪಾನಮುಕ್ತರನ್ನಾಗಿ ಮಾರ್ಪಡಿಸುವಲ್ಲಿ ಕೆರೆಗಳನ್ನ ಅಭಿವೃದ್ಧಿಗೊಳಿಸುವಲ್ಲಿ ಸ್ತ್ರೀ ಶಕ್ತಿ ಸಂಘಗಳ ಮೂಲಕ ಆರ್ಥಿಕ ನೆರವು ನೀಡುವ ಇಂತಹ ಸಾಕಷ್ಟು ಯೋಜನೆಗಳು ಎಲ್ಲವೂ ಸಹಾ ಅತ್ಯಂತ ಶ್ಲಾಘನೀಯವಾದವು ಎಂದರು. ಕಾರ್ಯಕ್ರಮದಲ್ಲಿ ವಲಯದ ಮೇಲ್ವಿಚಾರಕರಾದ ತುಕಾರಾಮ.ಪೀ. ಒಕ್ಕೂಟದ ಅಧ್ಯಕ್ಷೆ ಪ್ರಮೀಳಾ ಹಾಗೂ ಫಲಾನುಭವಿಗಳು ಮತ್ತು ಗ್ರಾಮದ ಮುಖಂಡರುಗಳು ಉಪಸ್ಥಿತರಿದ್ದರು.




ಕರ್ನಾಟಕ ದರ್ಶನ ಪ್ರವಾಸಕ್ಕೆ ಹೊಳಲ್ಕೆರೆ ಶಾಸಕ ಡಾ.ಎಂ. ಚಂದ್ರಪ್ಪನವರಿಂದ ಚಾಲನೆ.

# ಗ್ರಾಮ ದೇವತೆ ಶ್ರೀಚಳ್ಳಕೆರೆಯಮ್ಮನ ಜಾತ್ರೋತ್ಸವಕ್ಕೆ ಭರದ ಸಿದ್ಧತೆ

**ಮಾ. 11ರಿಂದ16ವರೆಗೆ ಜಾತ್ರೋತ್ಸವ: ಗೌಡ್ರಗುರುಸಿದ್ದಪ್ಪ**



» **ಚಳ್ಳಕೆರೆ**

ನಗರದ ಗ್ರಾಮ ದೇವತೆ ಶ್ರೀಚಳ್ಳಕೆರೆಯಮ್ಮನ ಜಾತ್ರಾ ಮಹೋತ್ಸವ ಮಾರ್ಚ್ 11ರಿಂದ 16ರ ತನಕ ನಡೆಯಲಿದೆ ಎಂದು ಧರ್ಮದರ್ಶಿ ಬಿ.ಜಿ ಗೌಡ್ರರಾಮಣ್ಣ ತಿಳಿಸಿದ್ಧಾರೆ.

ಈ ಬಗ್ಗೆ ಪತ್ರಿಕೆಗೆ ಮಾಹಿತಿ ನೀಡಿದ ಅವರು, ಈ ಬಾರಿಯ ಜಾತ್ರೆ ವಿಶೇಷವಾಗಿದ್ದು ಐದು ವರ್ಷಕ್ಕೊಮ್ಮೆ ಆಚರಣೆ ಮಾಡುವ ಜಾತ್ರೆಯಾಗಿದೆ. ಕಳೆದ 2018ರಲ್ಲಿ ಜಾತ್ರೆ ನಡೆದಿದ್ದು ನಂತರ ಪ್ರಸ್ತುತ ವರ್ಷ 2024ರಲ್ಲಿ ಈ ಜಾತ್ರೆ ನಡೆಯುವುದು ವಿಶೇಷವಾಗಿದೆ.

ಮಾರ್ಚ್ 11ರ ಸೋಮವಾರ ಬೆಳಗ್ಗೆ 11ಕ್ಕೆ ಮಹದೇವಿ ರಸ್ತೆ ಮೂಲಕ ದೊಡ್ಡೇರಿ ಗ್ರಾಮಕ್ಕೆ ತೆರಳಿ ಅಲ್ಲಿ ಜಲಧಿಗಂಗಾಪೂಜೆ ನಡೆಸಿ ಸಂಜೆ ವೀರಭದ್ರಸ್ವಾಮಿ ವೀರಗಾಸೆ, ಪುರಂತರ ವೀರನಾಟ್ಯ, ವೀರಭದ್ರಸ್ವಾಮಿ ಉತ್ಸವದೊಂದಿಗೆ ದೇವಸ್ಥಾನಕ್ಕೆ ವಾಪಾಸ್ ಬರಲಿದೆ. ಮಾರ್ಚ್ 12ರ ಮಂಗಳವಾರ ಅಮ್ಮನಿಗೆ ಮಾಂಗಲ್ಯಧಾರಣೆ, ಉಡಿತುಂಬುವ ಕಾರ್ಯಕ್ರಮ, ಮಾರ್ಚ್ 13ರ ಬುಧವಾರ ಹಿಟ್ಟಿನಾರತಿ, ಬೇವಿನ ಸೀರೆ ಉತ್ಸವ, 14ರಂದು ಗುರುವಾರ ಮದ್ಯಾಹ್ನ 12ಗಂಟೆಗೆ ಮುಕ್ತಿಬಾವುಟ ಹರಾಜು, 3.30ಕ್ಕೆ ಸಿಡಿ ಉತ್ಸವ ನಡೆಯಲಿದೆ. 15ರ ಶುಕ್ರವಾರ ಗಾವುಸಭೆ, ಪೋತರಾಜರ ವೀರನಾಟ್ಯ ಕಾರ್ಯಕ್ರಮವಿರುತ್ತದೆ. 16ರ ಶನಿವಾರ ಓಕಳಿ ಮತ್ತು ಪುರಂತರ ವೀರನಾಟ್ಯದೊಂದಿಗೆ ಜಾತ್ರಾ ಮಹೋತ್ಸವ ಮುಕ್ತಾಯವಾಗಲಿದೆ. ಭಕ್ತಾಧಿಗಳು ಎಲ್ಲಾ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ದೇವಿಯ ಕೃಪೆಗೆ ಪಾತ್ರರಾಗುವಂತೆ ಅವರು ಮನವಿ ಮಾಡಿದ್ಧಾರೆ.

## ಪ್ರಮುಖ ಸುದ್ದಿ

**ಮುಂಬರುವ ಎಸ್ಸೆಸ್ಸೆಲ್ಸಿ ಹಾಗೂ ಪಿಯುಸಿ ಪರೀಕ್ಷಾ ಸಿದ್ಧತೆಗೆ ಒಂದಿಷ್ಟು ಟಿಪ್ಸ್ ಜತೆ ಮಾದರಿ ಅಧ್ಯಯನ ವೇಳಾಪಟ್ಟಿ**

# ಪರೀಕ್ಷೆಯ ಭಯ ಬೇಡ: ಪರೀಕ್ಷಾ ತಯಾರಿಗೆ ಕಿವಿಮಾತು

» **ಮಹದೇವಪುರ ಶಿವಮೂರ್ತಿ**


ಪರಶುರಾಂಪುರ:ಪರೀಕ್ಷೆ ಎಂದರೆ ಭಯ, ಒತ್ತಡ ಇದ್ದೇ ಇರುತ್ತದೆ. ಆದರೆ ಇದನ್ನು ನಿವಾರಿಸಿ ಪರೀಕ್ಷೆ ಬರೆದರೆ ಮಾತ್ರ ಉತ್ತಮ ಅಂಕಗಳಿಕೆ ಸಾಧ್ಯವಿದೆ. ಹೀಗಾಗಿ ಪರೀಕ್ಷೆ ತಯಾರಿಗೆ ಅಧ್ಯಯನ ವೇಳಾಪಟ್ಟಿಯ ಜತೆ ಕೆಲವೊಂದು ಅಂಶಗಳನ್ನು ಗಮನದಲ್ಲಿಟ್ಟುಕೊಳ್ಳುವುದು ಬಹುಮುಖ್ಯವಾಗಿರುತ್ತದೆ.

ಇನ್ನೇನು ಕೆಲ ದಿನಗಳಲ್ಲಿ ಎಸ್ಸೆಸ್ಸೆಲ್ಸಿ ವಾರ್ಷಿಕ ಪರೀಕ್ಷೆಯೂ ಆರಂಭವಾಗುವುದು.ಸದ್ಯ ಶಾಲೆಗಳಲ್ಲಿ ಶಾಲೆ , ತಾಲೂಕು ,ಜಿಲ್ಲಾ ಹಂತದ ಪರೀಕ್ಷೆಗಳು ಪ್ರಾರಂಭವಾಗಿವೆ.ಪರೀಕ್ಷೆ ಎಂದಾಕ್ಷಣ ಕೆಲವು ವಿದ್ಯಾರ್ಥಿಗಳು ಭಯ ಪಡುತ್ತಾರೆ, ಒತ್ತಡಕ್ಕೊಳಗಾಗುತ್ತಾರೆ. ಅದರ ಬದಲು ಆತ್ಮವಿಶ್ವಾಸದಿಂದ ಕಲಿತರೆ ಕಠಿಣ ಪರೀಕ್ಷೆಯನ್ನೂ ನಿರಾಯಾಸದಿಂದ ಎದುರಿಸಲು ಸಾಧ್ಯ. ಪರೀಕ್ಷೆಯನ್ನು ಸುಲಭವಾಗಿ ಜಯಿಸಲು ಮಾನಸಿಕ ಸ್ಥೈರ್ಯದಿಂದ ದಿನಂಪ್ರತಿ ಎರಡು ಪ್ರಶ್ನೆ ಪತ್ರಿಕೆಯನ್ನು ಬಿಡಿಸಿ ಉತ್ತರಿಸಲು ಪ್ರಯತ್ನಿಸಬೇಕು. ಮನಸ್ಸಿನಲ್ಲಿ ಧನಾತ್ಮಕ ಚಿಂತನೆಗಳನ್ನು ಬೆಳೆಸಿದರೆ, ಜಯಶೀಲರಾಗಲು ಸಾಧ್ಯ. ಇಂದಿನ ಅನೇಕ ಮಂದಿ ವಿದ್ಯಾರ್ಥಿಗಳು ಪ್ರಶ್ನೆ ಪತ್ರಿಕೆಗಳನ್ನು ನೋಡಿದ ಕೂಡಲೇ ಅವಸರದಲ್ಲಿ ಉತ್ತರ ಬರೆಯುತ್ತಾರೆ. ಇದು ತಪ್ಪು. ಪ್ರಶ್ನೆಗಳಿಗೆ ಉತ್ತರ ಬರೆಯುವ ಮೊದಲು ಪ್ರಶ್ನೆಯನ್ನು ಅರ್ಥ ಮಾಡಿಕೊಳ್ಳಬೇಕು. ಬಳಿಕ, ಉತ್ತರಿಸುವ ಕ್ರಮ ಬೆಳೆಸಿಕೊಳ್ಳಬೇಕು.

ವಿದ್ಯಾರ್ಥಿಗಳು ಪರೀಕ್ಷೆ ಪ್ರಾರಂಭಕ್ಕೂ ಮುನ್ನ ಸಿದ್ಧತೆಗಳನ್ನು ಮಾಡಿಕೊಳ್ಳುವುದು ಅತೀ ಮುಖ್ಯ. ಅದರಲ್ಲಿಯೂ ಪರೀಕ್ಷೆಗೂ ಮುನ್ನ, ವೇಳಾಪಟ್ಟಿಯನ್ನು ಸಿದ್ಧಪಡಿಸಬೇಕು. ಪರೀಕ್ಷೆ ಸಮಯದಲ್ಲಿ ಮನಸ್ಸಿನಲ್ಲಿ ನಕಾರಾತ್ಮಕ ಚಿಂತನೆಗಳನ್ನು ಬೆಳೆಸಿಕೆಡಿಕೊಳ್ಳಬಾರದು. ಪರೀಕ್ಷೆ ಸಮೀಪಿಸುತ್ತಿದ್ದ ಕೇವಲ ಓದಿಗೆ ಮಹತ್ವ ನೀಡುವುದು ಕೂಡ ತಪ್ಪು. ಏಕತಾನತೆಯ ಓದಿನಿಂದಾಗಿ ಮೆದುಳಿಗೆ ಒತ್ತಡವಾಗುವ ಸಂಭವ ಹೆಚ್ಚಿದೆ.

**ಕಷ್ಟದ ವಿಷಯಕ್ಕೆ ಒತ್ತು ಕೊಡಿ:** ಿದಿನ ಪಾಠಗಳನ್ನು ಅದೇ ದಿನ ಓದುವ ಅಭ್ಯಾಸ ಮಾಡಿದರೆ ಪರೀಕ್ಷೆ ಬರೆಯುವಾಗ ವಿಷಯಗಳು ಬೇಗನೇ ನೆನಪಿಗೆ ಬರುತ್ತದೆ. ಕೆಲವು ವಿದ್ಯಾರ್ಥಿಗಳು ಅವರಿಗೆ ತುಂಬಾ ಇಷ್ಟವಿರುವ ವಿಷಯವನ್ನು ಚೆನ್ನಾಗಿ ಅಭ್ಯಾಸ ಮಾಡುತ್ತಾರೆ. ಅದನ್ನೇ ಜಾಸ್ತಿ ಓದಿ ಕಷ್ಟದ ವಿಷಯಗಳನ್ನು ಒದಲು ಹೋಗುವುದಿಲ್ಲ. ವಿದ್ಯಾರ್ಥಿಗಳು ಕಷ್ಟದ ವಿಷಯಗಳಿಗೆ ಹೆಚ್ಚು ಸಮಯ ನೀಡಿ ಅದನ್ನು ಹೆಚ್ಚು ಒತ್ತು ಕೊಟ್ಟು ಓದಬೇಕು. ಕೆಲವೊಮ್ಮೆ ಎಲ್ಲ ವಿಷಯದಲ್ಲಿ ಉತ್ತೀರ್ಣರಾಗಿ, ಕಷ್ಟದ ವಿಷಯದಲ್ಲಿ ಅನುತ್ತೀರ್ಣವಾಗಲು ಇದುವೇ ಕಾರಣವಾಗಬುದು.

**ನೋಟ್ ಮಾಡಿಕೊಳ್ಳಿ:** ಆದಷ್ಟು ತರಗತಿಯಲ್ಲಿ ಅಧ್ಯಾಪಕರು ಪಾಠ ಮಾಡುವಾಗ ನೋಟ್ಸ್ ಬರೆದಿಟ್ಟುಕೊಳ್ಳಬೇಕು. ಕೆಲವೊಮ್ಮೆ ಪಾಠ ಪುಸ್ತಕ ತೆರೆಯುವಾಗ ಅದನ್ನು ನೋಡಿಯೇ ತಲೆನೋವಾಗಿ



**ಅಧ್ಯಯನ ವೇಳಾಪಟ್ಟಿ**

ಎಸ್. ಎಸ್. ಎಲ್. ಸಿ. ಪರೀಕ್ಷೆಯಲ್ಲಿ ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆ ಹೊಂದಲು ವಿದ್ಯಾರ್ಥಿಗಳಿಗೆ ವಾರದ ಅಧ್ಯಯನ ವೇಳಾ ಪಟ್ಟಿ.

ವಿದ್ಯಾರ್ಥಿಗಳು ಅಭ್ಯಾಸ ಮಾಡಬೇಕಾದ ವಿಷಯ ಮತ್ತು ಇತರೆ ಕೆಲಸಗಳು

| ವೇಳೆ | ಸೋಮವಾರ | ಮಂಗಳವಾರ | ಬುಧವಾರ | ಗುರುವಾರ | ಶುಕ್ರವಾರ | ಶನಿವಾರ | ಭಾನುವಾರ |
|---|---|---|---|---|---|---|---|
| 5.00 ರಿಂದ 5.30 | ನಿತ್ಯಕರ್ಮ | ನಿತ್ಯಕರ್ಮ | ನಿತ್ಯಕರ್ಮ | ನಿತ್ಯಕರ್ಮ | ನಿತ್ಯಕರ್ಮ | ನಿತ್ಯಕರ್ಮ | ನಿತ್ಯಕರ್ಮ |
| 5.30 ರಿಂದ 6.00 | ಗಣಿತ | ಕನ್ನಡ | ಸಮಾಜ | ಇಂಗ್ಲಿಷ್ | ಗಣಿತ | ಹಿಂದಿ | ಕನ್ನಡ |
| 6.00 ರಿಂದ 6.30 | ವಿಜ್ಞಾನ | ವಿಜ್ಞಾನ | ಹಿಂದಿ | ವಿಜ್ಞಾನ | ವಿಜ್ಞಾನ | ಕನ್ನಡ | ಹಿಂದಿ |
| 6.30 ರಿಂದ 7.00 | ಇಂಗ್ಲಿಷ್ | ಇಂಗ್ಲಿಷ್ | ಇಂಗ್ಲಿಷ್ | ಸಮಾಜ | ಇಂಗ್ಲಿಷ್ | ಮನೆಯಿಂದ ಶಾಲೆಗೆ ಸಿದ್ಧತೆ ಪ್ರಯಾಣ | ಇಂಗ್ಲಿಷ್ |
| 7.00 ರಿಂದ 7.30 | ಸಮಾಜ | ಹಿಂದಿ | ಗಣಿತ | ಕನ್ನಡ | ಸಮಾಜ | | ಸಮಾಜ |
| 7.30 ರಿಂದ 8.00 | ಮನೆ ಕೆಲಸ ಮತ್ತು ಇತರೆ ಬರೆವಣಿಗೆ/ ಸ್ನಾನ | | | | | | ವಿರಾಮ |
| 8.00 ರಿಂದ 8.30 | ಶಾಲೆಗೆ ಹೊರಡಲು ಸಿದ್ಧತೆ/ ಉಪಹಾರ | | | | | ಶಾಲಾ ಸಮಯ | ಹಿಂದಿ |
| 8.30 ರಿಂದ 9.00 | ಮನೆಯಿಂದ ಶಾಲೆಗೆ ಪ್ರಯಾಣ / ಅಲ್ಪವಿರಾಮ | | | | | | ಕನ್ನಡ |
| 9.00 ರಿಂದ 10.00 | | | | | | | ಉಪಹಾರ |
| 10.00 ರಿಂದ 11.30 | | | | | | | ವಿರಾಮ |
| 11.30 ರಿಂದ 12.15 | | | | | | | ಕುಟುಂಬದ |
| 12.15 ರಿಂದ 1.00 | | | | | | ಶಾಲೆಯಿಂದ ಮನೆಗೆ | ಒಡನಾಟ |
| 1.00 ರಿಂದ 1.45 | ಶಾಲಾ ಸಮಯ | | | | | | ಊಟ |
| 1.45 ರಿಂದ 2.30 | | | | | | ಮನೆಕೆಲಸ | ಮನೆಕೆಲಸ |
| 2.30 ರಿಂದ 3.15 | | | | | | ಬರೆವಣಿಗೆ | ಬರೆವಣಿಗೆ |
| 3.15 ರಿಂದ 4.00 | | | | | | ವಿಶ್ರಾಂತಿ | ವಿಶ್ರಾಂತಿ |
| 4.00 ರಿಂದ 5.00 | | | | | | | |
| 5.00 ರಿಂದ 6.30 | ಶಾಲೆಯಿಂದ ಮನೆಗೆ ಪ್ರಯಾಣ ಅಲ್ಪವಿರಾಮ | | | | | ಕ್ರೀಡೆ | ಕ್ರೀಡೆ |
| 6.30 ರಿಂದ 7.00 | ಮನೆ ಕೆಲಸ, ಬರೆವಣಿಗೆ /ಸ್ನೇಹಿತ/ ಕುಟುಂಬದವರೊಂದಿಗೆ ಚರ್ಚೆ | | | | | ಬರೆವಣಿಗೆ | ಬರೆವಣಿಗೆ |
| 7.00 ರಿಂದ 7.30 | ಗಣಿತ | ಗಣಿತ | ಗಣಿತ | ಗಣಿತ | ಗಣಿತ | ಗಣಿತ | ಗಣಿತ |
| 7.30 ರಿಂದ 8.00 | ವಿಜ್ಞಾನ | ವಿಜ್ಞಾನ | ವಿಜ್ಞಾನ | ವಿಜ್ಞಾನ | ಹಿಂದಿ | ವಿಜ್ಞಾನ | ವಿಜ್ಞಾನ |
| 8.00 ರಿಂದ 8.30 | ಕನ್ನಡ | ಕನ್ನಡ | ಕನ್ನಡ | ಕನ್ನಡ | ಕನ್ನಡ | ಸಮಾಜ | ಗಣಿತ |
| 8.30 ರಿಂದ 9.00 | ಊಟ, ಅಲ್ಪವಿರಾಮ / ಕುಟುಂಬದವರೊಂದಿಗೆ / ಸ್ನೇಹಿತರೊಂದಿಗೆ ಚರ್ಚೆ / ಇತರೆ ಬರೆವಣಿಗೆ/ ಗ್ರಾಫ್/ ಚಿತ್ರ ಬಿಡಿಸುವುದು/ ನಿತ್ಯ ನಡೆದ ಪಾಠ ಮೆಲುಕು ಹಾಕುವುದು. | | | | | | |
| 9.00 ರಿಂದ 9.30 | | | | | | | |
| 9.30 ರಿಂದ 10.00 | ಇಂಗ್ಲಿಷ್ | ಇಂಗ್ಲಿಷ್ | ಕನ್ನಡ | ಗಣಿತ | ಇಂಗ್ಲಿಷ್ | ಇಂಗ್ಲಿಷ್ | ಇಂಗ್ಲಿಷ್ |
| 10.00 ರಿಂದ 10.30 | ಸಮಾಜ | ಸಮಾಜ | ಸಮಾಜ | ಇಂಗ್ಲಿಷ್ | ಸಮಾಜ | ಸಮಾಜ | ಸಮಾಜ |
| 10.30 ರಿಂದ 11.00 | ಹಿಂದಿ | ಹಿಂದಿ | ಹಿಂದಿ | ಹಿಂದಿ | ಹಿಂದಿ | ವಿಜ್ಞಾನ | ವಿಜ್ಞಾನ |
| 11.00 ರಿಂದ 5.00 | ನಿದ್ರೆ / ವಿಶ್ರಾಂತಿ | | | | | | |

ಮೇಲ್ಕಂಡ ಪ್ರತಿವಿಷಯಕ್ಕೆ ನೀಡಿರುವ 30 ನಿಮಿಷದಲ್ಲಿ 15 ನಿಮಿಷ ಓದು, 10 ನಿಮಿಷ ಬರೆವಣಿಗೆ, 5 ನಿಮಿಷ ವಿಶ್ರಾಂತಿ. ನೀಡಿದಲ್ಲಿ ಕಲಿಕೆಯಲ್ಲಿ ಅತ್ಯುತ್ತಮ ಪ್ರಗತಿ ಸಾಧಿಸಬಹುದು. ವಿಷಯವನ್ನು ಅನುಕೂಲಕ್ಕೆ ತಕ್ಕಂತೆ ಸ್ಥಳಾಂತರಿಸಿಕೊಳ್ಳುವುದು.

ಶುಭವಾಗಲಿ

ಓದದೇ ಇರುತ್ತೇವೆ. ನೋಟ್ಸ್ ನಿಮ್ಮದೇ ಕೈ ಬರಹವಾಗಿರುವುದರಿಂದ ಓದಲು ಆಸಕ್ತಿ ಉಂಟಾಗಿ, ಕಲಿಯಲು ಸುಲಭವಾಗುತ್ತದೆ.

**ಗಣಿತ ಕಷ್ಟ ಅಲ್ಲ:** ಗಣಿತ (ಲೆಕ್ಕ ) ವಿಷಯ ಕಷ್ಟ ಎಂದು ತೀರ್ಮಾನ ಮಾಡಿ ಅದನ್ನು ದೂರ ಮಾಡಿದರೆ ಅದು ಅರ್ಥವೇ ಆಗಲು ಸಾದ್ಯವಿಲ್ಲ. ಓದಿಗಾಗಿ ಒಂದು ವೇಳಾಪಟ್ಟಿ ತಯಾರಿಸಿ, ಒಂದೊಂದು ವಿಷಯಕ್ಕೆ ಸಮಯ ನಿಗದಿ ಮಾಡಬೇಕು. ಅದರಲ್ಲಿ ಸ್ವಲ್ಪ ವಿಶ್ರಾಂತಿಗೂ ಅವಧಿ ಮೀಸಲಿಡಿ. ಕಲಿತ ವಿಷಯಗಳ ಕುರಿತು ನಿಮ್ಮ ಸ್ನೇಹಿತರೊಂದಿಗೆ ಚರ್ಚೆ ಮಾಡಿಕೊಳ್ಳಿ. ಇದರಿಂದ ಬೇರೊಬ್ಬರಿಗೆ ವಿವರಿಸುವಾಗ ನಮ್ಮಲ್ಲಿ ನೆನಪಿನ ಶಕ್ತಿ ಹೆಚ್ಚುತ್ತದೆ. ವಿಷಯವನ್ನು ಅರ್ಥ ಮಾಡಿ ಓದಿದರೆ ಪರೀಕ್ಷೆ ಸಂದರ್ಭ ಸ್ವಂತ ವಾಕ್ಯದಲ್ಲಿ ಬರೆಯಬಹುದು

**.ಪ್ರಶ್ನೆ ಪತ್ರಿಕೆ ತಯಾರಿ** ಪರೀಕ್ಷೆಯ ತಯಾರಿ ಮಾಡುವಾಗ ಹಳೆಯ ಪ್ರಶ್ನಾಪತ್ರಿಕೆಗಳನ್ನು ಗಮನಿಸಬೇಕು. 5–6 ವರ್ಷದ ಪ್ರಶ್ನೆ ಪತ್ರಿಕೆಗಳನ್ನು ನೋಡಿದಾಗ ಪ್ರಶ್ನೆ ಪತ್ರಿಕೆಯ ಮಾದರಿಯ ಅರಿವಾಯುತ್ತದೆ. ಕೆಲವೊಂದು ಪ್ರಶ್ನೆಗಳು ಪ್ರತಿ ವರ್ಷ ಪುನರಾವರ್ತನೆಯಾಗುತ್ತಿರುತ್ತದೆ. ಅಂತಹ ಪ್ರಶ್ನೆಗಳಿಗೆ ಗಮನಕೊಟ್ಟು ಓದಬೇಕು. ಪ್ರಾಕ್ಟಿಕಲ್ ವಿಷಯಗಳನ್ನು ಬರೆದು ಕಲಿಯಬೇಕು. ಇದು ಪರೀಕ್ಷೆಯ ಸಮಯದಲ್ಲಿ ನೆನಪಿಗೆ ಬಂರುತ್ತದೆ.

ಬೆಳಗ್ಗೆಯಿಂದ ಮಧ್ಯಾಹ್ನದ ವರೆಗೆ ಓದಿ, ಮಧ್ಯಾಹ್ನದ ಊಟ ಆದ ಬಳಿಕ ಪುಸ್ತಕ ನೋಡುವಾಗ ನಿದ್ದೆ ಬರುತ್ತದೆ. ವಿದ್ಯಾರ್ಥಿಗಳು ಪರೀಕ್ಷೆಯ ಸಮಯದಲ್ಲಿ ರಾತ್ರಿ ಮಾತ್ರ ಮಲಗುವುದು ಉತ್ತಮ. ಮಧ್ಯಾಹ್ನದ ಹೊತ್ತಿನಲ್ಲಿ ವಿದ್ಯಾರ್ಥಿಗಳು ತಮಗೆ ಸುಲಭವಾದ ವಿಷಯವನ್ನು ಆರಿಸಿ ಓದಬೇಕು. ತಣ್ಣೀರಿನಿಂದ ಮುಖ ತೊಳೆದುಕೊಂಡು ಓದಬೇಕು. ಒಂಂದು ಪಾಠಕ್ಕೆ ಸಮಯ ನಿಗದಿ ಮಾಡಿ ಓದಬೇಕು. ರಾತ್ರಿ 10.30 ವರೆಗೆ ಓದಿ ಚೆನ್ನಾಗಿ ನಿದ್ದೆ ಮಾಡಬೇಕು.

**ಅಂಕಕ್ಕೆ ತಕ್ಕಂತೆ ಬರೆಯಿರಿ:** 2 ಅಂಕದ ಪ್ರಶ್ನೆಗೆ ಒಂದು ಪುಟದ ಉತ್ತರದ ಅಗತ್ಯವಿಲ್ಲ. ಎಷ್ಟು ಅಗತ್ಯ ಅಷ್ಟು ಬರೆದರೆ ಸೂಕ್ತ. ಇಲ್ಲದಿದ್ದರೆ ಸಮಯ ವ್ಯರ್ಥವಾಗಿ ಎಲ್ಲ ಪ್ರಶ್ನೆಗಳಿಗೆ ಉತ್ತರ ಬರೆಯಲು ಸಮಯ ಸಿಗುವುದಿಲ್ಲ. ಯಾವ ಪ್ರಶ್ನೆಗೆ ಉತ್ತರ ಸರಿಯಾಗಿ ಗೊತ್ತಿದೆಯೋ ಅದನ್ನು ಮೊದಲಿಗೆ ಬರೆಯಿರಿ. ಪರೀಕ್ಷೆಗೆ ತೆರಳುವಾಗ ಎರಡ್ಮೂರು ಪೆನ್ನಿರಲಿ.

**ಒತ್ತಾಯಮಾಡಬೇಡಿ:** ಕಲಿಯವವಿಷಯದಲ್ಲಿ ಮಕ್ಕಳಿಗೆ ಒತ್ತಡ ಹೇರಬಾರದು. ಹೆಚ್ಚು ಅಂಕ ಪಡೆಯಲೇಬೇಕೆಂದು ಬೇರೆ ಮಕ್ಕಳ ಜತೆ ಹೋಲಿಕೆಯೂ ಮಾಡಬಾರದು. ಕಲಿಯಲು ಉತ್ತೇಜನ ನೀಡಿ. ಗಿಡ ನೆಟ್ಟು ನೀರು, ಗೊಬ್ಬರ ಹಾಕಿ ಬೆಳೆಸುವುದಷ್ಟೇ ನಮ್ಮ ಕರ್ತವ್ಯ. ಅದರ ಫಲದ ಫಲಿತಾಂಶ ನಮ್ಮ ಕೈಯಲಿಲ್ಲ. ಒಳ್ಳೆ ಫಲ ನೀಡುತ್ತದೆ ಎಂಬ ನಂಬಿಕೆಯಿಂದ ಕೆಲಸ ಮಾಡಬೇಕು.

**ಪರೀಕ್ಷಾ ಅಕ್ರಮ ಬೇಡ:** ಪರೀಕ್ಷೆಯಲ್ಲಿ ನಕಲು ಮಾಡುವಂತಹ ಆಲೋಚನೆ ಮಾಡಬಾರದು. ಯಾವುದೇ ಆಗಿರಲಿ ಅದು ನೇರ ದಾರಿಯಿಂದ ನಮಗೆ ಸಿಕ್ಕಿದರೆ ಮಾತ್ರ ಶಾಶ್ವತ. ಪರೀಕ್ಷೆ ಬರೆಯುವಾಗ ಬೇರೆಯವರು ಎಷ್ಟು ಹೆಚ್ಚುವರಿ ಪೇಪರ್ ತೆಗೆದುಕೊಂಡಿದ್ದಾರೆ? ಎಷ್ಟು ಬರೆಯುತ್ತಾರೆ ಅದರ ಬಗ್ಗೆ ಚಿಂತಿಸಬಾರದು. ಅದು ನಮ್ಮ ಏಕಾಗ್ರತೆಯನ್ನು ಹಾಳು ಮಾಡುತ್ತದೆ. ಎಲ್ಲರೂ ಧೈರ್ಯದಿಂದ, ಉಲ್ಲಾಸದಿಂದ ಪರೀಕ್ಷೆಗೆ ಹಾಜರಾಗಿ ಒಳ್ಳೆಯ ಫಲಿತಾಂಶವನ್ನು ಪಡೆಯಿರಿ. ಮನಸಿಟ್ಟು ಓದಿ, ಪುಸ್ತಕವನ್ನು ಪ್ರೀತಿಸಿ, ಯಾರೂ ಕೈ ಬಿಟ್ಟರೂ ನೀವು ಕಲಿತ ವಿದ್ಯೆ ನಿಮ್ಮ ಕೈ ಬಿಡದು. ನಿಮಗೂ ಅನ್ನ ಹಾಕುತ್ತದೆ, ನೀವು ಇನ್ನೊಬ್ಬರಿಗೆ ಅನ್ನ ಹಾಕುವ ಸಾಮರ್ಥ್ಯವನ್ನು ನೀಡುತ್ತದೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T